ಸಂಪುಟ 01 | ಸಂಚಿಕೆ 57 | ಬುಧವಾರ 07 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಮಹಾಯಾನ ನ್ಯೂ ಇಯರ್ (Mahayana New Year) ಎಂಬುದು ಮಹಾಯಾನ ಬೌದ್ಧ ಪರಂಪರೆಯ ಹೊಸ ವರ್ಷದ ಆಚರಣೆ ಆಗಿದೆ.

2) ಆರ್ಥೋಡಾಕ್ಸ್ ಕ್ರಿಸ್ಮಸ್ ಡೇ Orthodox Christmas Day ಅನ್ನು ಆರ್ಥೋಡಾಕ್ಸ್ ಕ್ರೈಸ್ತ ಸಮುದಾಯಗಳು ಯೇಸು ಕ್ರಿಸ್ತರ ಜನ್ಮೋತ್ಸವವಾಗಿ ಆಚರಿಸುತ್ತವೆ. ಈ ಆಚರಣೆ ಜೂಲಿಯನ್ ಕ್ಯಾಲೆಂಡರ್ ಆಧಾರಿತವಾಗಿರುವುದರಿಂದ, ಗ್ರೆಗೋರಿಯನ್ ಕ್ಯಾಲೆಂಡರ್ ಪ್ರಕಾರ ಇದು ಜನವರಿ 7ರಂದು ಬರುತ್ತದೆ.

## ಸುಭಾಷಿತ

"ಬದುಕಿನಲ್ಲಿ ಬರುವ ಕಷ್ಟಗಳು ನಿನ್ನನ್ನು ಮುರಿಯಲು ಅಲ್ಲ, ಬದಲಿಗೆ ನಿನ್ನ ಶಕ್ತಿಯನ್ನು ಅರಿಯಲು."

ರವೀಂದ್ರನಾಥ ಟ್ಯಾಗೋರ್

## ಸಿಎಂ ಆಗಿ ದೇವರಾಜ ಅರಸು ದಾಖಲೆ ಸರಿಗಟ್ಟಿದ ಸಿದ್ದರಾಮಯ್ಯ

# ಸಿಎಂಗೆ ತುಂಬು ಹೃದಯದ ಶುಭ ಹಾರೈಕೆ

ಬೆಂಗಳೂರು: ರಾಜ್ಯದ ಈವರಗಿನ ಅತಿ ಸುದೀರ್ಘ ಅವಧಿಯವರೆಗೆ ಮುಖ್ಯಮಂತ್ರಿಯಾಗಿದ್ದ ದಿ.ದೇವರಾಜು ಅರಸು ಅವರ ದಾಖಲೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಮುರಿಯಲಿದ್ದು, ಇನ್ನೊಂದೇ ದಿನ ಅಂದರೆ ಬುಧವಾರ ಅರಸು ಅವರ ಹೆಸರಿನಲ್ಲಿ ಈವರೆಗೂ ಇದ್ದ ದಾಖಲೆಯನ್ನು ಮುರಿದು ನಾಡಿನ ಅತಿ ಸುದೀರ್ಘ ಅವಧಿಯ ಸಿಎಂ ಎಂಬ ಹೊಸ ಇತಿಹಾಸ ಸೃಷ್ಟಿಸಲಿದ್ದಾರೆ.

ಜ.6ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ 2,792 ದಿನ ಪೂರೈಸಲಿದ್ದು, ಆ ಮೂಲಕ ದೇವರಾಜು ಅರಸು ಅವರ ದಾಖಲೆ ಸರಿಗಟ್ಟಲಿದ್ದಾರೆ. ದೇವರಾಜ ಅರಸು ಅವರು 1972ರ ಮಾ.20ರಂದು ಮೊದಲ ಬಾರಿಗೆ ಮುಖ್ಯಮಂತ್ರಿಯಾಗಿ ಚುಕ್ಕಾಣಿ ಹಿಡಿದಿದ್ದರು. 1977ರ ಡಿ.31ರವರೆಗೆ ಅಂದರೆ 5 ವರ್ಷ 286 ದಿನಗಳ ಕಾಲ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದರು. ಬಳಿಕ 1978ರ ಫೆ.28ರಿಂದ 1980ರ ಜ.12ರವರೆಗೆ ಅಂದರೆ 1 ವರ್ಷ 318 ದಿನಗಳ ಕಾಲ ಸೇರಿ ಒಟ್ಟು 2,792 ದಿನಗಳಕಾಲ ಮುಖ್ಯಮಂತ್ರಿಯಾಗಿದ್ದರು.

ದೀರ್ಘ ಅವಧಿ ಮುಖ್ಯಮಂತ್ರಿ ಚುಕ್ಕಾಣಿ ಹಿಡಿದಿದ್ದ ದೇವರಾಜ ಅರಸು ಅವರ ಈ ದಾಖಲೆಯನ್ನು ನಾಲ್ಕೂವರೆ ದಶಕಗಳ ಬಳಿಕ



ಸಿದ್ದರಾಮಯ್ಯ ಅವರು ಮುರಿಯುತ್ತಿದ್ದಾರೆ. ಈ ನಡುವೆ ಸಿದ್ದರಾಮಯ್ಯ ಅವರ ಅಭಿಮಾನಿಗಳು ಈ ದಾಖಲೆಯ ಕ್ಷಣ ಸಂಭ್ರಮಿಸಲು ರಾಜ್ಯದಾದ್ಯಂತ ಸಿದ್ಧತೆ ನಡೆಸಿದ್ದಾರೆ.ಪ್ರಮುಖ ಬೀದಿಗಳಲ್ಲಿ ಫ್ಲೆಕ್ಸ್ ಗಳನ್ನು ಕಟ್ಟಿ ಸಂಭ್ರಮಿಸುತ್ತಿದ್ದಾರೆ. ಜ.6ರಂದು ನೆಲಮಂಗಲದ ಭಕ್ತನ ಪಾಳ್ಯದಲ್ಲಿ ಯುವ ಅಹಿಂತ ವತಿಯಿಂದ ನಾಟಿ ಕೋಳಿ ಊತಣ ಕೂಡ ಆಯೋಜಿಸುವ ಮೂಲಕ ವಿಭಿನ್ನವಾಗಿ ಸಂಭ್ರಮಾಚರಣೆಗೆ ನಿರ್ಧರಿಸಲಾಗಿದೆ. ನಾಟಿಕೋಳಿ ಸಾಂಬಾರ್, ಮುದ್ದೆ, ಕಾಳು ಗೊಜ್ಜು, ರೈಸ್, ಪುಲಾವ್ ಮತ್ತು ಸಿಹಿತಿಂಡಿ ನೀಡಲು ತೀರ್ಮಾನಿಸಲಾಗಿದ್ದು, ಇದರ ಪೋಸ್ಟರ್‌ನ್ನು ವಿಧಾನಪರಿಷತ್ ಸದಸ್ಯ ಬಿ,ಕೆ. ಹರಿಪ್ರಸಾದ್ ಅವರು ಬಿಡುಗಡೆ ಮಾಡಿದ್ದಾರೆ.

ಸಿದ್ದರಾಮಯ್ಯಗೆ ಡಿಕೆಶಿ ಶುಭ ಹಾರೈಕೆ: ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಶುಭಾಶಯಗಳನ್ನು ತಿಳಿಸಿದ್ದಾರೆ. ಇದು ಬಹಳ ಸಂತೋಷದ ವಿಷಯ. ನಮಗೆ, ನಿಮಗೆ ಎಲ್ಲರಿಗೂ ಸಂತೋಷದ ವಿಚಾರ. ನೀವು ಈ ಬಗ್ಗೆ ಉತ್ತಮವಾಗಿ ಪ್ರಚಾರ ಮಾಡಿ. ನಾನು ಅವರಿಗೆ ತುಂಬು ಹೃದಯದಿಂದ ಶುಭ ಹಾರೈಸುತ್ತೇನೆ. ಜೀವನದಲ್ಲಿ ಸಾಧನೆ ಮಾಡಬೇಕು ಎಂಬ ಬಯಕೆ ಎಲ್ಲರಿಗೂ ಇರುತ್ತದೆ. ನಮ್ಮ ಗೌರವಾನ್ವಿತ ಮುಖ್ಯಮಂತ್ರಿಗಳು ಇತಿಹಾಸದ ಪುಟಕ್ಕೆ ಹಿಂದೆಯೂ ಸೇರಿದ್ದಾರೆ, ಮುಂದೆಯೂ ಸೇರುತ್ತಾರೆ ಎಂದು ಹೇಳಿದರು.

ಇದರಿಂದ ನಿಮ್ಮ ಹಾದಿ ಸುಗಮವಾಗುತ್ತದೆಯೇ ಎಂದು ಕೇಳಿದಾಗ, ಹಳ್ಳಿಯಿಂದ ಬಂದ ನಾನು ಇಲ್ಲಿಯವರೆಗೂ ತಲುಪಿದ್ದೇನೆ. ಇದಕ್ಕಿಂತ ಇನ್ನೇನು ಬೇಕು ನನಗೆ. ಯಾವುದನ್ನೂ ಹುಡುಕಿಕೊಂಡು ಹೋಗುವ ಅವಶ್ಯಕತೆ ಇಲ್ಲ. ನನ್ನ ಬಾಯಲ್ಲಿ ಏನೇನೋ ಮಾತನಾಡಿಸಲು ಪ್ರಯತ್ನಿಸಬೇಡಿ ಎಂದು ತಿಳಿಸಿದರು. ಶುಭ ದಿನಗಳು ಬರುತ್ತಿವೆ ಎಂಬ ಡಿ.ಕೆ. ಸುರೇಶ್ ಅವರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಲಿ, ನಮಗೆ ಎಲ್ಲಾ ದಿನವೂ ಒಳ್ಳೆಯ ದಿನಗಳು, ನಿನ್ನೆ ಭೂತಕಾಲ, ನಾಳೆ ಭವಿಷ್ಯಕಾಲ, ಇಂದು ವರ್ತಮಾನ. ನಿಮ್ಮ ಜೊತೆ ಮಾತನಾಡುತ್ತಿರುವುದು ಒಳ್ಳೆಯ ದಿನ ಎಂದು ಚಟಾಕಿ ಹಾರಿಸಿದರು.

## ಆಸ್ಪತ್ರೆಗೆ ದಾಖಲಾದ ಸೋನಿಯಾ ಗಾಂಧಿ

ನೈಜ್ಯ ದೆಸೆ ನ್ಯೂಸ್

ನವದೆಹಲಿ: ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರನ್ನು ಇಲ್ಲಿನ ಗಂಗಾ ರಾಮ್ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.ಅವರು ಆರೋಗ್ಯವಾಗಿದ್ದಾರೆ ಮತ್ತು ಹೃದಯ ಹೃದಯ ತಜ್ಞ ವೈದ್ಯರ ಮೇಲ್ವಿಚಾರಣೆಯಲ್ಲಿ ಇರಿಸಲಾಗಿದೆ. ಇದು ನಿಯಮಿತವಾದ ದಾಖಲಾತಿ, ಆದರೆ ಅವರಿಗೆ ದೀರ್ಘಕಾಲದ ಕೆಮಿನ ಸಮಸ್ಯೆ ಇದೆ, ಮತ್ತು ಅವರು ತಪಾಸಣೆಗಾಗಿ ಬರುತ್ತಾರೆ ಎಂದು ಆಸ್ಪತ್ರೆ ಅಧಿಕಾರಿಗಳು ತಿಳಿಸಿದ್ದಾರೆ.



ವಿಶೇಷವಾಗಿ ನಗರದಲ್ಲಿನ ವಾಯು ಮಾಲಿನ್ಯದಿಂದಾಗಿ ನಿನ್ನೆ ಸಂಜೆ ಅವರನ್ನು ದಾಖಲಿಸಲಾಗಿದೆ ಎಂದು ಆಸ್ಪತ್ರೆಯ ಮೂಲಗಳು ಪಿಟಿಐಗೆ ತಿಳಿಸಿವೆ.ಸೋನಿಯಾ ಗಾಂಧಿ ಕಳೆದ ತಿಂಗಳು ತಮ 79 ವರ್ಷ ಹುಟ್ಟುಹಬ್ಬ ಆಚರಿಸಿಕೊಂಡಿದ್ದರು.

## ಶೀಘ್ರದಲ್ಲಿ ಸ್ವತಂತ್ರ್ಯವಾಗಿ ಟೆಕ್ಸ್ ಟೈಲ್ ಪಾರ್ಕ್ ಸ್ಥಾಪಿಸುವ ಸಾಧ್ಯತೆ

ನೈಜ್ಯ ದೆಸೆ ನ್ಯೂಸ್

ರಾಯಚೂರು: ರಾಯಚೂರಿನಲ್ಲಿ ಸ್ಥಾಪಿಸಲಾಗಿರುತ್ತಿರುವ ಟೆಕ್ಸ್ ಟೈಲ್ ಪಾರ್ಕ್ ಈ ಮೊದಲು ಸಹಭಾಗಿತ್ವದಲ್ಲಿ ನಡೆಸಲು ಉದ್ದೇಶಿಲಾಗಿತ್ತು. ಆದರೀಗ ರಾಜ್ಯ ಸರ್ಕಾರವೇ ಪಿಪಿಪಿ ಮಾದರಿ ಪಾರ್ಕ್ ಸ್ಥಾಪಿಸುವದನ್ನು ಕೈ ಬಿಟ್ಟು ಶೀಘ್ರದಲ್ಲಿ ಆದೇಶ ಹೊರಬೀಳುವ ಸಾಧ್ಯತೆಗಳಿವೆಂದು ರಾಯಚೂರು ಕಾಟನ್ ಮಿಲ್ಲರ್ಸ್ ಅಸೋಸಿಯೇಷನ್ ಅಧ್ಯಕ್ಷ ವಿ.ಲಕ್ಷ್ಮೀರೆಡ್ಡಿ ಹೇಳಿದರು.



ನಗರದ ರಾಜೇಂದ್ರ ಗಂಜ್‌ನಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನಗರದ ಅನೇಕ ಕೈಗಾರಿಕೆಗಳು ಸೇರಿದಂತೆ ಉದ್ಯಮಗಳಲ್ಲಿ ಅನ್ಯ ರಾಜ್ಯದವೇ ಉದ್ಯೋಗ ಪಡೆಯುತ್ತಿದ್ದಾರೆ. ಸ್ಥಳೀಯರ ಇಲ್ಲಿಯೇ ಕೆಲಸ ಮಾಡಲು ಹಿಂಜರೆದರು ಬೇರಡೆಗೆ ಉದ್ಯೋಗ ಅರಸಿ ಹೋಗುತ್ತಿದ್ದಾರೆ. ಜಿಲ್ಲಾ ಕೈಗಾರಿಕಾ ಕೇಂದ್ರ ಸಹಯೋಗದಲ್ಲಿ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ಕೈಗಾರಿಕೆಗಳಲ್ಲಿ ಹೆಲ್ಪರ್ ಮೆಕ್ಯಾನಿಕಲ್ ಸೇರಿದಂತೆ ಲೆಕ್ಕಪತ್ರ ನಿರ್ವಹಣೆ ಪಡೆಯಲು ಯುವಕ ಯುವತಿಯರು ಮುಂದಾಗಬೇಕೆಂದರು ಸ್ಥಳೀಯವಾಗಿ ಲಭ್ಯವಾಗುವ ಉದ್ಯಮಿಗಳಿಗೆ ಅಗತ್ಯವಿರುವ ಉದ್ಯೋಗ ತರಬೇತಿ ಪಡೆಯಲು ಅಸೋಸಿಯೇಷನ್‌ನಿಂದ ತರಬೇತಿ ಕೇಂದ್ರ ಸ್ಥಾಪಿಸಲು ಯೋಚಿಸಲಾಗುತ್ತಿದೆ ಇದರಿಂದ ಸಾವಿರಾರು ಯುವಕ ಯುವತಿಯರಿಗೆ ಉದ್ಯೋಗ ದೊರೆಯಲಿದೆ ಎಂದರು. ಈ ಸಂದರ್ಭದಲ್ಲಿ ಅಸೋಸಿಯೇಷನ್ ಪ್ರಮುಖ ಸಿದ್ದನಗೌಡ ಗಾರಲದಿನ್ನಿ, ಶೈಲೇಶಕುಮಾರ, ವಿಜಯಕುಮಾರ ರೆಡ್ಡಿ ಇದ್ದರು.

## ಹುಟ್ಟುಹಬ್ಬವನ್ನು ಸೇವೆಯಾಗಿ ರೂಪಿಸಿದ ಕ.ರ.ವೇ ಸ್ವಾಭಿಮಾನಿ ಸೇನೆ ಅಧ್ಯಕ್ಷ

ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಜ 6 ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ತಾಲೂಕಾ ಅಧ್ಯಕ್ಷ ಜಿಲಾನಿ ಪಾಷಾ ರವರ 46ನೇ ಹುಟ್ಟುಹಬ್ಬದ ಪ್ರಯುಕ್ತ, ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳಿಗೆ ಹಾಲು ಹಾಗೂ ಬ್ರೆಡ್ ವಿತರಣೆ ಮಾಡುವ ಮೂಲಕ ಮಾನವೀಯ ಸೇವಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ರೋಗಿಗಳಿಗೆ ಹಾಲು ಮತ್ತು ಬ್ರೆಡ್ ವಿತರಿಸಿ ನಂತರ ಮಾತನಾಡಿದ ಜಿಲಾನಿ ಪಾಷಾ ಸಮಾಜದ ದುರ್ಬಲ ವರ್ಗದವರ ನೋವಿಗೆ ಸ್ಪಂದಿಸುವುದು ನಮ್ಮ ಕರ್ತವ್ಯ. ಹುಟ್ಟು ಹಬ್ಬದಂತಹ ವಿಶೇಷ ಸಂದರ್ಭಗಳಲ್ಲಿ ವೈಭವಕ್ಕಿಂತ ಸೇವೆಯೇ ಶ್ರೇಷ್ಠ ಎಂದು ಹೇಳಿದರು.



ಈ ಸಂದರ್ಭದಲ್ಲಿ ಡಾ. ರುದ್ರಗೌಡ, ರವಿಕುಮಾರ್ ಬರಗುಡಿ, ಅಜೀಜ್ ಪಾಷಾ, ಮೋಸಿನ್ ಖಾನ್, ಅಲ್ಲಾವುದ್ದೀನ್ ಬಾಬಾ, ಬಸನಗೌಡ, ಜಮೀರ್ ಖಾನ್, ತಿಮ್ಮನಗೌಡ ಭೂಪುರ, ಮಲ್ಲನಗೌಡ ಮರಿಯಪ್ಪ ಹಟ್ಟಿ, ರಹೀಂ ಬಾಬಾ, ಅವಟಿ ಆರಿಫ್, ಅಮರೇಶ್ ಗೊರೆಬಾಳ್, ಪ್ರಭುಗೌಡ ಭಗೀರಥ, ಬಸವರಾಜ್, ರಾಜು ಯಲಗಟ್ಟಾ, ನನ್ನೇ ಸಾಬ್, ಪರಮಣ್ಣ ಸೇರಿದಂತೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

## ದಲಿತ ಚೇತನ ದಿ. ಲಕ್ಷ್ಮಿ ನಾರಾಯಣ ನಾಗವಾರರವರ ಪ್ರಥಮ ವರ್ಷದ ಪುಣ್ಯಸ್ಮರಣೆ :"ರಾಜ್ಯಮಟ್ಟದ ಜನ ಜಾಗೃತಿಗೆ ಸಮಾವೇಶ"

ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಜ 7 ದಲಿತ ಚೇತನ ದಿ. ಲಕ್ಷ್ಮಿ ನಾರಾಯಣ ನಾಗವಾರ ರವರ ಪ್ರಥ'ಮ ವರ್ಷದ ಪುಣ್ಯಸ್ಮರಣೆಯ ಅಂಗವಾಗಿ "ರಾಜ್ಯ ಮಟ್ಟದ ಜನಜಾಗೃತಿ ಸಮಾವೇಶ"ವನ್ನು ಜ.12ರಂದು ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿಯ ಕೊಪ್ಪ ರಸ್ತೆಯ ಬಂಟರ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

/ಸಮಾವೇಶವನ್ನು ಆಯುಷ್ಮಾನ್ ಕಿಮ್ಮನೆ ರತ್ನಾಕರ್, ಮಾಜಿ ಸಚಿವರು ಕರ್ನಾಟಕ ಸರ್ಕಾರ ಅವರು ಉದ್ಘಾಟಿಸಲಿದ್ದಾರೆ. ಆಯುಷ್ಮಾನ್ ಅಬ್ಬಯ್ಯ ಪ್ರಸಾದ್, ಶಾಸಕರು ಹುಬ್ಬಳ್ಳಿ?ಧಾರವಾಡ ಪೂರ್ವ ಕ್ಷೇತ್ರ ಹಾಗೂ ಅಧ್ಯಕ್ಷರು, ಕೊಳಚೆ ನಿರ್ಮೂಲನೆ ಮಂಡಳಿ ಬೆಂಗಳೂರು ಅವರು ಬಾಬಾ ಸಾಹೇಬ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಿದ್ದಾರೆ.



ಈ ಸಮಾರಂಭದ ಘನ ಅಧ್ಯಕ್ಷತೆಯನ್ನು ಆಯುಷ್ಮಾನ್ ಶಾಮರಾವ್ ಘಾಟೆ, ರಾಜ್ಯ ಸಂಚಾಲಕರು ಕ.ರಾ. ದ.ಸಂ.ಸಮಿತಿ ಅವರು ವಹಿಸಲಿದ್ದಾರೆ.

ಮುಖ್ಯ ಭಾಷಣಕಾರರಾಗಿ ಆಯುಷ್ಮಾನ್ ಆರ್.ಡಿ. ಮಲ್ಲಯ್ಯ, ಪ್ರಾಂಶುಪಾಲರು, ಶರಾವತಿ ಪ್ರಥ'ಮ ದರ್ಜೆ ಕಾಲೇಜು, ಕೋಣಂದೂರು ಹಾಗೂ ಆಯುಷ್ಮಾನ್ ಡಾ. ಪ್ರದೀಪ್, ಸಹ ಪ್ರಾಧ್ಯಾಪಕರು, ಶರಾವತಿ ಪ್ರಥ'ಮ ದರ್ಜೆ ಕಾಲೇಜು, ಕೋಣಂದೂರು ಅವರು ಆಗಮಿಸಲಿದ್ದಾರೆ. ಇದಲ್ಲದೆ ಕ.ರಾ.ದ.ಸಂ.ಸಮಿತಿಯ ರಾಜ್ಯ ಮಹಿಳಾ ಸಂಚಾಲಕಿ ಶೋಭಾ ಕಟ್ಟಿಮನಿ ಸೇರಿದಂತೆ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸಮಾವೇಶದ ಆಯೋಜನೆಯಲ್ಲಿ ಭಾಗವಹಿಸಲಿದ್ದಾರೆ.

ನಾಡಿನ ಪ್ರಗತಿಪರ ಚಿಂತಕರು, ಸಾಹಿತಿಗಳು, ದಲಿತಪರ ಸಂಘಟನೆಗಳು, ದಿ. ಲಕ್ಷ್ಮಿ ನಾರಾಯಣ ನಾಗವಾರ ಅವರ ಒಡನಾಡಿಗಳು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮಾವೇಶವನ್ನು ಯಶಸ್ವಿಗೊಳಿಸಬೇಕೆಂದು ಸಂಘಟಕರು ಮನವಿ ಮಾಡಿದ್ದಾರೆ. ಈ ಕುರಿತು ರಾಜ್ಯ ಸಂಘಟನಾ ಸಂಚಾಲಕರಾದ ಪ್ರಭುಲಿಂಗ ಮೇಗಳಮನಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಿಕಾ ಹಬ್ಬ ಶಿಕ್ಷಣ ಇಲಾಖೆಯ ಮಹತ್ವದ ಕಾರ್ಯಕ್ರಮ: ದಮ್ಮೂರಮಠ

ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಕಲಿಕಾ ಹಬ್ಬವು ಮಕ್ಕಳ ಕಲಿಕೆಯನ್ನು ಸಂತೋಷದಾಯಕ ಮತ್ತು ಆಕರ್ಷಕ ರೀತಿಯಲ್ಲಿ ಸುಧಾರಿಸಲು ಶಾಲಾ ಶಿಕ್ಷಣ ಇಲಾಖೆಯ ಮಹತ್ವದ ಕಾರ್ಯಕ್ರಮವಾಗಿದೆ ಎಂದು ಮುದ್ದೇಬಿಹಾಳ ಪ್ರಭಾರಿ ಕ್ಷೇತ್ರಶಿಕ್ಷಣಾಧಿಕಾರಿ ಆರ್ ಬಿ ದಮ್ಮೂರಮಠ ಹೇಳಿದರು.

ತಾಲೂಕಿನ ಬಳಗಾನೂರ ಗ್ರಾಮದಲ್ಲಿ ಸರ್ಕಾರಿ ಮಾದರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡ ಮಿಣಜಗಿ ಕ್ಲಸ್ಟರ್ ಮಟ್ಟದ 2025-26 ನೇ ಸಾಲಿನ ಕಲಿಕಾ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಕ್ಕಳಲ್ಲಿ ಮೂಲಭೂತ ಸಾಕ್ಷರತೆ ಮತ್ತು ಸಂಖ್ಯೆಗಳ ಜ್ಞಾನವನ್ನು ಬೆಳೆಸುವುದು, ಕಲಿಕಾ ಹಬ್ಬದಿಂದ ಮಕ್ಕಳಲ್ಲಿ ಶಾಲಾ ಭಾಷೆ ಮತ್ತು ಮಾತೃಭಾಷೆಗಳಲ್ಲಿ




ಕಲಿಯುವ ಆಸಕ್ತಿ ಮೂಡಿಸುವ ಉದ್ದೇಶವಾಗಿದೆ ಶಿಕ್ಷಕರು ಇದರ ಯಶಸ್ವಿಗೆ ಹೆಚ್ಚಿನ ಆಸಕ್ತಿ ವಹಿಸಬೇಕು. ಇದು ಮಕ್ಕಳಲ್ಲಿ ಅಡಗಿರುವ ಸೂಕ್ತ ಪ್ರತಿಭೆಗಳನ್ನು ಅಭಿವ್ಯಕ್ತಗೊಳಿಸುವ ಕಾರ್ಯಕ್ರಮವಾಗಿದೆ ನಿರ್ಣಾಯಕರು ಪ್ರಾಮಾಣಿಕವಾಗಿ ತಮ್ಮ ಕರ್ತವ್ಯವನ್ನು ನಿರ್ವಹಿಸಬೇಕು ಎಂದರು. ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕ ಅಧ್ಯಕ್ಷ ಬಿ.ಟಿ.ವಜ್ಜಲ್ ಮಾತನಾಡಿ ಇದು ಸ್ಪರ್ಧಾತ್ಮಕ ಯುಗವಾಗಿದೆ ಇಲ್ಲಿ ಕೇವಲ ಓದು ಬರಹ ಕಲಿತರೆ ಸಾಲದು ಮಕ್ಕಳು ಪ್ರತಿಭೆಗಳನ್ನು ಬೆಳೆಸಿಕೊಳ್ಳುವುದು ಅಗತ್ಯವಾಗಿದೆ, ಉಜ್ವಲ ಭವಿಷ್ಯವನ್ನು ನಿರ್ಮಾಣ ಮಾಡಲು ಕಠಿಣ ಪರಿಶ್ರಮಿಗಳಾಗಬೇಕು ಹೆತ್ತವರ ನಿರೀಕ್ಷೆಗಳನ್ನು ಹುಸಿಗೊಳಿಸಬಾರದು ಎಂದರು. ಇದೇ ಸಂದರ್ಭದಲ್ಲಿ ಕ್ಷೇತ್ರದ ಸಮನ್ವಯಾಧಿಕಾರಿ ಆರ್.ಬಿ. ದಮ್ಮೂರಮಠ ಹಾಗೂ ತಾಲೂಕ ದೈಹಿಕ ಶಿಕ್ಷಣಾಧಿಕಾರಿ ಎ.ವೈ.ದಖನಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಮುಖ್ಯ ಗುರುಗಳಾದ ಆರ್. ಎಂ.ಮುರಾಳ ಅಧ್ಯಕ್ಷತೆ ವಹಿಸಿದ್ದರು.ಇಸಿಓ ಸುರೇಶ ಹಿರೇಮಠ ಕಲಿಕಾ ಹಬ್ಬ ಸೆಲ್ಫಿ ಸ್ಟ್ಯಾಂಡ್ ಅನಾವರಣಗೊಳಿಸಿದರು. ರಾಜ್ಯ ಉತ್ತಮ ಶಿಕ್ಷಕಿ ಪ್ರಶಸ್ತಿ ಪುರಸ್ಕೃತ ಮಡಿವಾಳಮ್ಮ ನಾಡಗೌಡ ಕಾರ್ಯಕ್ರಮ ನಿರ್ವಹಿಸಿದರು.ಸಿಆರ್ಪಿ ಬಾಲಾಜಿಸಿಂಗ್ ಬಿಜಾಪುರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಗಣ್ಯರಾದ ಮಲ್ಲಣ್ಣ ದೋರನಹಳ್ಳಿ, ಚೆನ್ನಣ್ಣ ಅಲದಿ, ಲೋಕಣ್ಣ ಸಜ್ಜನ, ನಿವೃತ್ತ ಶಿಕ್ಷಕ ಶಿವಣ್ಣ ಕಡಕೋಳ ಸಂಗನಗೌಡ ಬಿರಾದಾರ,ಬಸನಗೌಡ ದೋರನಹಳ್ಳಿ, ಮುತ್ತು ಮನಹಳ್ಳಿ, ಭೀಮನಗೌಡ ಬಿರಾದಾರ, ಪ್ರಭು ಪತ್ತೆಪೂರ, ಪ್ರಭು ವಾಲಿ,ಇಸಿಓ ಡಿ.ವೈ.ಗುರಿಕಾರ,ಬಿ.ಆರ್ಪಿ ಕೆ.ಎಸ್. ಸಜ್ಜನ,ಸಿಆರ್ಪಿ ಎಸ್.ಎಂ.ಪಾಲ್ಕಿ,ಶಿಕ್ಷಕ ಬಿ.ಐ.ಸಜ್ಜನ, ಸುರೇಶ ವಾಲೀಕಾರ,ಎಸ್.ಬಿ.ಬೀರಗೊಂಡ, ಆರ್. ಎಸ್.ಹಿಪ್ಪರಗಿ,ಮು.ಗು. ಸಿ.ಎಸ್.ಸಿದ್ದರೆಡ್ಡಿ ಕೆ.ಡಿ.ಬಿರಾದಾರ, ಬಿ.ಸಿ.ಮಸರಕಲ್,ಸಂಜು ಹಜೇರಿ,ರಾಘು ಬಾಟಲಿ, ಮಿಣಜಗಿ ಕ್ಲಸ್ಟರ್ ಶಾಲೆ ಶಿಕ್ಷಕರು, ನಿರ್ಣಾಯಕರು ಹಾಗೂ ಮಕ್ಕಳು ಇದ್ದರು.ಕುಮಾರಿ ಅನುಜಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಶಿಕ್ಷಕ ಎಸ್ ಎಮ್ ಬೈಚಬಾಳ ಸ್ವಾಗತಿಸಿದರು. ಶಿಕ್ಷಕ ಬಿ ಐ ಸಜ್ಜನ ವಂದಿಸಿದರು.

## ಸಾಹಿತ್ಯ ಸಿಂಚನ

..ಮರಣ..

ಲಂಚಕ್ಕೆ ಮರಣ
ಮಂಚಕ್ಕೆ ಮರಣ
ಕೊಂಚ ಕೋಪಕ್ಕೆ ಮರಣ
ತುಸು ನಗುವಿಗೆ ಮರಣ
ಹಸುಗೂಸಿಗೆ ಮರಣ
ಹೇ ಮರಣ ಹೇಳಿ ಹೋಗು ಕಾರಣ

ಯಾರಿಗೂ ತಿಳಿಯದು ಮರಣ
ತಿಳಿದು ತಿಳಿಯದೆ ಆಗುತ್ತಿದೆ ಮರಣ
ತಿಳಿದು ಆದರೂ ಏನು ಮಾಡಕ್ಕಾಗುತ್ತಿಲ್ಲ ಮರಣ
ತಿಳಿಯದೆ ಆದರೆ ಅದು ಮರಣ
ತಿಳಿದು ಆದರೂ ಮರಣ
ಆದ್ರೂ ಏನೂ ಗೊತ್ತಾಗುತ್ತಿಲ್ಲ ಕಾರಣ
ಹೇ ಮರಣ ಹೇಳಿ ಹೋಗು ಕಾರಣ

ಶುಭ ಗಳಿಗೆಯಲ್ಲೂ ಮರಣ
ಕಷ್ಟ-ಕೋಪಕ್ಕು ಮರಣ
ಇಷ್ಟಗಳ್ಳಲ್ಲೂ ಮರಣ
ಹೇ ಮರಣ ಹೇಳಿ ಹೋಗು ಕಾರಣ

ಗೊತ್ತಿಲ್ಲದೆ ಆಗುವುದು ಮರಣ
ಗೊತ್ತಿದ್ದು ಆಗೋದು ಜನನ
ಕೊನೆಗೆ ಯಾರಿಗೂ ತಿಳಿಯದು ಜನನ ಮತ್ತು ಮರಣದ
ಕಾರಣ ಹೇ ಮರಣ ಹೇಳಿ ಹೋಗು ಕಾರಣ

ಎಸ್. ದುರಗಪ್ಪ. ಕುಷ್ಟಗಿ.

## ಜನವರಿ 7ರಂದು ಕ್ರಿಯಾ ಯೋಜನೆ ಸಿದ್ಧಪಡಿಸಲು ಪಾಲಿಕೆಯಲ್ಲಿ ಸಭೆ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 06 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷತೆಯಲ್ಲಿ ಜನವರಿ 7ರ ಬೆಳಿಗ್ಗೆ 11 ಗಂಟೆಗೆ ಮಹಾನಗರ ಪಾಲಿಕೆ ಜೋನಲ್-2 ಕೋರ್ಟ ಹಾಲ್ (ಹಳೆ ಜಿಲ್ಲಾಧಿಕಾರಿಗಳ ಕಚೇರಿ) ಸಭೆ ಕರೆಯಲಾಗಿದೆ.**

ಈ ಸಭೆಯಲ್ಲಿ ರಾಯಚೂರು ಮಹಾನಗರಪಾಲಿಕೆ ವತಿಯಿಂದ ಅನುಷ್ಠಾನವಾಗುತ್ತಿರುವ ಶೇ.29 ಪ.ಜಾತಿ & ಪ.ಪಂಗಡ ಶೇ.7.25 ಇತರೆ ಹಿಂದುಳಿದ ಜನಾಂಗ ಶೇ.5 ವಿಕಲಚೇತನರ ಮುಂತಾದ ಬಡತನ ನಿರ್ಮೂಲನ ಯೋಜನೆಗಳ ಕುರಿತು, ಬಾಕಿ ಉಳಿದ ಅನುದಾನಕ್ಕೆ ಅರ್ಹ ಬಡವರಿಗೆ ಸದುಪಯೋಗವಾಗುವಂತ ಚಟುವಟಿಕೆಗಳ ಕ್ರಿಯಾ ಯೋಜನೆ ಕೈಗೆತ್ತಿಕೊಳ್ಳಬೇಕಾಗಿರುತ್ತದೆ. ಆದಕಾರಣ ಪ.ಜಾತಿ/ಪ.ಪಂಗಡ, ಇತರೆ ಹಿಂದುಳಿದ ವರ್ಗ, ವಿಕಲಚೇತನರು, ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಮುಂತಾದ ಸಂಘಟನೆಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಕರೆದಿರುವ ಸಭೆಗೆ ತಪ್ಪದೆ ಹಾಜರಾಗಿ ಕ್ರಿಯಾ ಯೋಜನೆಯನ್ನು ಸುತ್ತೋಲೆ ಪ್ರಕಾರ ರೂಪಿಸುವುದಕ್ಕೆ ಸಲಹೆ ಸೂಚನೆಗಳನ್ನು ನೀಡಬೇಕೆಂದು ರಾಯಚೂರು ಮಹಾನಗರ ಪಾಲಿಕೆಯ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನವರಿ 8ರಂದು ಸಾಹಿತಿಗಳು, ಕವಿಗಳು, ಬುದ್ಧಿಜೀವಿಗಳು, ವಿವಿಧ ಸಂಘಟನೆಗಳ ಪದಾಧಿಕಾರಿಗಳ, ವ್ಯಾಪಾರಸ್ಥರ ಸಭೆ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 06 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಲ್ಲಿ ಎಡೆದೊರೆ ನಾಡು ರಾಯಚೂರು ಉತ್ಸವ ಕಾರ್ಯಕ್ರಮವು ಜನವರಿ 29, 30 ಹಾಗೂ 31ರಂದು ನಡೆಯಲಿದೆ. ಜಿಲ್ಲೆಯ ಸಾಹಿತಿಗಳು, ಕವಿಗಳು, ಬುದ್ಧಿ ಜೀವಿಗಳು, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ವ್ಯಾಪಾರಸ್ಥರು, ವಿವಿಧ ಕ್ಷೇತ್ರಗಳ ಸಾಧಕರು ಹಾಗೂ ಕಲಾವಿದರು ಮತ್ತು ಸಾರ್ವಜನಿಕರು ಹಾಜರಾಗುವ ಜೊತೆಗೆ ಈ ಸಾಂಸ್ಕೃತಿ-ಕ ಹಬ್ಬವು ಕೇವಲ ಒಂದು ಸರ್ಕಾರಿ ಕಾರ್ಯಕ್ರಮವಾಗದೆ,**

ಪ್ರತಿಯೊಬ್ಬ ನಾಗರಿಕನೂ ಹೆಮ್ಮೆಪಡುವಂತಹ ಜನೋತ್ಸವವಾಗಿ ಮೂಡಿಬರಲು ತಮ್ಮ ಅಮೂಲ್ಯ ಸಮಯ, ಸಲಹೆ ನೀಡಲು ಹಾಗೂ ಮಹತ್ಕಾರ್ಯ ಯಶಸ್ವಿಗೊಳಿಸಲು ಕೋರಿ ಪೂರ್ವಭಾವಿ ಸಭೆಯನ್ನು ಜಿಲ್ಲಾಧಿಕಾ-ರಿಗಳ ಅಧ್ಯಕ್ಷತೆಯಲ್ಲಿ ಜನವರಿ 08ರ ಬೆಳಗ್ಗೆ 11ಕ್ಕೆ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದು, ಎಲ್ಲರೂ ಆಗಮಿಸಬೇಕು ಎಂದು ಅಪರ ಜಿಲ್ಲಾಧಿಕಾ-ರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉದ್ಯಾನವನ ಯೋಜನೆ ಕೈಬಿಟ್ಟು ಮೂಲಭೂತ ಸೌಕರ್ಯಗಳಿಗೆ ಆದ್ಯತೆ ನೀಡಬೇಕು ದಲಿತ ಸೇನೆ ಆಗ್ರಹ

❏ ನೈಜ್ಯ ದೆಸೆ ನ್ಯೂಸ್




**ಮಾನ್ವಿ: ತಾಲ್ಲೂಕಿನ ಚಿಕ್ಕಸೂಗೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಿವೇಶನಗಳ ಸ್ಥಳದಲ್ಲೇ ಉದ್ಯಾನವನ ನಿರ್ಮಿಸಲು ಉದ್ದೇಶಿಸಿರುವ ಕ್ರಮವನ್ನು ತಕ್ಷಣ ತಡೆಹಿಡಿದು, ಗ್ರಾಮದ ಬಹುಮುಖ್ಯ ಮೂಲಭೂತ ಸೌಕರ್ಯಗಳ ಕಾಮಗಾರಿಗಳನ್ನು ಕೈಗೊಳ್ಳಬೇಕೆಂದು ದಲಿತ ಸೇನೆಯ ರಾಜ್ಯ ಸಂಘಟನಾ ಕಾರ್ಯದರ್ಶಿರಾದ ಡಾ. ಜಾವೀದ್ ಖಾನ್ ಆಗ್ರಹಿಸಿದರು.**

ಈ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ ಮಾತನಾಡಿದ ಅವರು, ಚಿಕ್ಕಸೂಗೂರು ಗ್ರಾಮದಲ್ಲಿ ಹಲವು ವರ್ಷಗಳಿಂದ ಮೂಲಭೂತ ಸೌಕರ್ಯಗಳ ಕೊರತೆ ಎದುರಾಗಿದ್ದು, ವಿಶೇಷವಾಗಿ ಪರಿಶಿಷ್ಟ ಜಾತಿ ವಸತಿ ಪ್ರದೇಶಗಳಲ್ಲಿ ಸಮಸ್ಯೆಗಳು ತೀವ್ರವಾಗಿವೆ ಎಂದರು. ಸುರ್ವಣ ಕಾಲೋನಿಯಿಂದ ಪರಿಶಿಷ್ಟ ಜಾತಿ ಏರಿಯಾ ಮೂಲಕ ಸ್ಮಶಾನದ ರಸ್ತೆಯವರೆಗೆ ರಾಜ್ ಕಾಲುವೆ ನಿರ್ಮಾಣ, ಸಂಗಮೇಶ್ವರ ದೇವಸ್ಥಾನದ ಪಕ್ಕದಲ್ಲಿರುವ ಪರಿಶಿಷ್ಟ ಜಾತಿ ಏರಿಯಾದಲ್ಲಿ ಚರಂಡಿ ನಿರ್ಮಾಣ, ಪ.ಜಾತಿಯ ಜನತಾ ಕಾಲೋನಿಯಿಂದ ಹೈದರಾಬಾದ್ ಮುಖ್ಯ ರಸ್ತೆಗೆ ಮೂರು ಸಂಪರ್ಕ ರಸ್ತೆ ನಿರ್ಮಾಣ, ಶ್ರೀ ಆಂಜಿನಯ್ಯ ದೇವಸ್ಥಾನದ ಪಕ್ಕದಲ್ಲಿ ಹಾದು ಹೋಗುವ ರಾಜ್ ಕಾಲುವೆಯ ನೂತನ ನಿರ್ಮಾಣ ಸೇರಿದಂತೆ ಹಲವು ಕಾಮಗಾ-ರಿಗಳು ಅತ್ಯವಶ್ಯಕವಾಗಿವೆ ಎಂದು ವಿವರಿಸಿದರು.

ನಂತರ ಮಾತನಾಡಿದ ದಲಿತ ಸೇನೆ ಜಿಲ್ಲಾಧ್ಯಕ್ಷರಾದ ಮಾರುತಿ ಚಿಕ್ಕಸೂಗೂರು, ವತ್ತೂರು ಕ್ರಾಸ್‌ನಲ್ಲಿ ಅತಿಕ್ರಮಣಗೊಂಡಿರುವ ಅನಧಿಕೃತ ಶೆಡ್‌ಗಳನ್ನು ತೆರವುಗೊಳಿಸಿ, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಹೈಟೆಕ್ ಶೌಚಾಲಯ ಹಾಗೂ ಉತ್ತಮ ಬಸ್ ನಿಲ್ದಾಣ ಕಟ್ಟಡ ನಿರ್ಮಿಸಬೇಕಾಗಿದೆ ಎಂದು ತಿಳಿಸಿದರು. ಇಷ್ಟೊಂದು ತುರ್ತು ಸಮಸ್ಯೆಗಳು ಇದ್ದರೂ, ಸಂಬಂಧಪಟ್ಟ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮೇಲಾಧಿಕಾ-ರಿಗಳಿಗೆ ತಪ್ಪು ಮಾಹಿತಿ ನೀಡಿ, ಮೇಲಾಧಿಕಾರಿಗಳ ಆದೇಶವಿದೆ ಎಂದು ಹೇಳಿಕೊಂಡು ನಿವೇಶನಗಳಲ್ಲಿ ಉದ್ಯಾನವನ ನಿರ್ಮಿಸಲು ಮುಂದಾಗಿರುವುದು ಕಾನೂನುಬಾಹಿರ ಕ್ರಮವಾಗಿದ್ದು, ಇದನ್ನು ತಕ್ಷಣ ನಿಲ್ಲಿಸಬೇಕು ಎಂದು ಅವರು ಒತ್ತಾಯಿಸಿದರು.

ಚಿಕ್ಕಸೂಗೂರು ಪಂಚಾಯತಿಗೆ ಈಗಾಗಲೇ ಮಂಜೂರಾಗಿರುವ ಸುಮಾರು ನಾಲ್ಕು ಕೋಟಿ ಅರುವತ್ತು ಲಕ್ಷ ರೂಪಾಯಿ ಅನುದಾನವನ್ನು ಉದ್ಯಾನವನಕ್ಕೆ ಬಳಸದೆ, ಮೇಲ್ಕಂಡ ಅಗತ್ಯ ಮೂಲಭೂತ ಸೌಕರ್ಯಗಳ ಕಾಮಗಾರಿಗಳಿಗೆ ಬಳಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಡಳಿತವು ಸ್ಪಷ್ಟ ಆದ-ೀಶ ನೀಡಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಸುರೇಶ್ ಬಾಬು, ಬಾಬು, ಕೃಷ್ಣ ಮಾರ್ಷಲ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಹಾಲಾಪೂರ:ನಾಡಕಚೇರಿ ಅಧಿಕಾರಿಗಳು ಎಲ್ಲರೂ ಗೈರು, ಕುರ್ಚಿ ಖಾಲಿ ಖಾಲಿ, ಸಾರ್ವಜನಿಕರು ಆಕ್ರೋಶ




❏ ನೈಜ್ಯ ದೆಸೆ ನ್ಯೂಸ್

ಮಸ್ಕಿ ತಾಲೂಕಿನ ಹಾಲಾಪೂರ ನಾಡಕಚೇ-ರಿಯೂ ಸಿಬ್ಬಂದಿಗಳಿಲ್ಲದೆ ಕುರ್ಚಿಗಳು ಖಾಲಿ ಖಾಲಿ, ಕಚೇರಿಗೆ ಬಂದಿರುವ ಸಾರ್ವಜನಿಕರು ಆಕ್ರೋಶದ ಮಾತುಗಳಾಡಿದರು.

ನಾಡಕಚೇರಿಯಲ್ಲಿ ಐದು ಜನ ಗ್ರಾಮ ಲೆಕ್ಕಾಧಿಕಾರಿಗಳು, ಒಬ್ಬರು ಕಂದಾಯ ನಿರೀಕ್ಷಕರು, ಉಪ ತಹಸಿಲ್ದಾರ, ಒಬ್ಬರು ಕೇಸ್ ವರ್ಕರ್ ಇಷ್ಟೆಲ್ಲ ಸಿಬ್ಬಂದಿ ಒಳಗೊಂಡಿರುವ ನಾಡಕಚೇರಿ ಇಂದು 11:30 ಆದರೂ ಕೂಡ ಕೇವಲ ಒಬ್ಬರು ಕಂಪ್ಯೂಟರ್ ವರ್ಕರ್ ಮಾತ್ರ ಕಚೇರಿಯಲಿ ಕೆಲಸ ಮಾಡುತ್ತಿದ್ದು ಉಳಿದ ಯಾವ ಸಿಬ್ಬಂದಿ ಇಲ್ಲ, ಈ ಒಂದು ನಾಡು ಕಚೇರಿ ಅಂದಾಜು 30 ಹಳ್ಳಿ ಗಳನ್ನು ಹೊಂದಿರುವ ದೊಡ್ಡ ನಾಡ ಕಚೇರಿ, ಬೆಳಗ್ಗೆ 11:00ಗೆ ದೂರದ ಮಲದಗುಡ್ಡ , ಮಲ್ಕಾಪುರ, ತೋರಣದಿನ್ನಿ ಇಲ್ಲಿಂದ ಹೆಣ್ಣು ಮಕ್ಕಳು ಕಚೇರಿಗೆ ಬಂದು ಕುಂತು ಕುಂತು ಅಧಿಕಾರಗಳ ಗೈರು ನೋಡಿ ಬೇಸತ್ತು ಇಡಿಶಾಪ ಹಾಕಿ ಪುನ ಮನೆಗೆ ತೆರಳಿದರು.

ಅಂಗವಿಕಲರು ಕೂಡ ಕಚೇರಿಗೆ ಅಲ್ಲಿದು ಬಂದರೆ ಇಲ್ಲಿ ಯಾವ ಅಧಿಕಾರಿ ಇಲ್ಲ, ಈ ಬಗ್ಗೆ ಮಸ್ಕಿ ತಹಸಿಲ್ದಾರ್ ರನ್ನು ಕರೆ ಮಾಡಿ ಸಂಪರ್ಕಿಸಿದಾಗ ತಹಶಿಲ್ದಾರ ಮಾತನಾಡಿ ಅಧಿಕಾರಿಗಳು ಬರುತ್ತಾರೆ ಹೆಚ್ಚುಕಮ್ಮಿ ಆಗುತ್ತೆ ಕಾಯಬೇಕು, 12 ಗಂಟೆಯಾದರೂ ಇನ್ನು ಕಾಯಬೇಕು ಎಂದು ನಿರ್ಲಕ್ಷ್ಯ ಅಧಿಕಾರಿಗಳ ಬಗ್ಗೆ ತಹಶೀಲ್ದಾರರು ಸಮರ್ಥನೆ ಮಾಡಿಕೊಳ್ಳುತ್ತಾರೆ ಇದೆಷ್ಟು ಸರಿ, ಒಟ್ಟಾರೆ ಇಲ್ಲಿಯ ಗ್ರಾಮ ಲೆಕ್ಕಾಧಿಕಾ-ರಿಗಳು, ಆರ್ ಐ ಹಾಗೂ ಇನ್ನಿತರರು ಮಸ್ಕಿಯ ಎಪಿಎಂಸಿಯಲ್ಲಿ ಸಿಗುತ್ತಾರೆ,

ಹಾಲಾಪೂರಕ್ಕೆ ನಾಡಕಚೇರಿ ಏಕೆ ಬೇಕು ಇದನ್ನು ಮುಚ್ಚಿಬಿಡಿ ಎಂದು ನಾಡಕಚೇರಿಗೆ ದೂರದ ಗ್ರಾಮಗಳಿಂದ ಬಂದ ಈರನಗೌಡ ದಳಪತಿ, ರವಿ ದೇಸಾಯಿ ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷರು, ಕುಮಾರ ಎಮ್ ರಾಮಲದಿನ್ನಿ, ಅರಳಪ್ಪ ಯದ್ದಲದಿನ್ನಿ, ನಾಗಪ್ಪ ತೋರಣದಿನ್ನಿ, ಅಮರೇಶ ಜಂಗಮರಳ್ಳಿ , ಮುದುಕಪ್ಪ, ಮಂಜುಳಾ ಹಾಗೂ ಇನ್ನಿತರರು ಸೇರಿ ಅಂಗವಿಕಲರು, ಮಹಿಳೆಯರು ಬಹಳಷ್ಟು ಆಕ್ರೋಶ ಭರಿತರಾಗಿ ಮಾತನಾಡಿದರು.

# ಅತಿ ಹೆಚ್ಚು ಅವಧಿ ದಾಖಲೆ ಬರೆದ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಭಿಮಾನಿಗಳಿಂದ ಸಂಭ್ರಮಾಚರಣೆ


❏ ನೈಜ್ಯ ದೆಸೆ ನ್ಯೂಸ್




**ಮಸ್ಕಿ ಕರ್ನಾಟಕ ಚರಿತ್ರೆಯಲ್ಲಿ ಮೊಟ್ಟ ಮೊದಲಿಗೆ ಅತಿ ಹೆಚ್ಚು ದಿನಗಳ ಕಾಲ ಮುಖ್ಯಮಂತ್ರಿಯಾಗಿ ದಾಖಲೆ ಮಾಡಿದ ಹಿಂದುಳಿದ ವರ್ಗದ ನಾಯಕ, ಭಾಗ್ಯಗಳ ಸರದಾರ, ನೇರ ನುಡಿ, ದಿಟ್ಟ ವ್ಯಕ್ತಿತ್ವ ಹೊಂದಿದ ಶ್ರೀ ಸಿದ್ದರಾಮಯ್ಯ ಅವರ ದಾಖಲೆ ಪ್ರಯುಕ್ತ ಇಂದು ಪಟ್ಟಣದಲ್ಲಿ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಮೂರ್ತಿಗೆ ಹಾರ ಹಾಕಿ ಗೌರವ ಅರ್ಪಿಸಿ ನಂತರ ಅಭಿನಂದನ್ ಸ್ಫೂರ್ತಿ ಧಾಮ ಅನಾಥ ವಿಕಲಚೇತನ ಹಾಗೂ ಬಡ ಮಕ್ಕಳ ಆಶ್ರಮದಲ್ಲಿ ನೋಟ್ ಬುಕ್, ಆಹಾರ ಕಿಟ್, ಹಣ್ಣುಗಳನ್ನು ಮಕ್ಕಳಿಗೆ ಹಾಗೂ ಮಹಿಳೆಯರಿಗೂ, ಸಾರ್ವಜನಿಕರಿಗೂ ಸಿಹಿ ತಿನ್ನಿಸಿ ಸಂಭ್ರಮ ಆಚರಣೆ ಮಾಡಲಾಯಿತು.**

ನಂತರ ಅತಿ ಹೆಚ್ಚು ಅವಧಿಗೆ ಮುಖ್ಯಮಂತ್ರಿ ಅಧಿಕಾರ ಹೊಂದಿ ಕರ್ನಾಟಕ ಐತಿಹಾಸಿಕ ಚರಿತ್ರೆಯಲ್ಲಿ ದಾಖಲೆ ಬರೆದ ಶ್ರೀ ಸಿದ್ದರಾಮಯ್ಯ ರವರನ್ನು ಕುರಿತು ಮುಖಂಡರು ಮಾತನಾಡಿದರು.ಈ ಸಂದರ್ಭದಲ್ಲಿ ಮಾಳಪ್ಪ ಪೂಜಾರಿ, ಬಿ ಕರಿಯಪ್ಪ ಹಾಲಾಪೂರ ,ಮಲ್ಲನಗೌಡ ಸುಂಕನೂರ, ಕರಿಯಪ್ಪ ತಾಲೂಕು ಪಂಚಾಯತ ಕೆಡಿಪಿ ಸದಸ್ಯರು, ಹನುಮೇಶ್ ಬಾಗೋಡಿ , ಮಾಳಿಂಗರಾಯ ಕಡುಬೂರ, ನಾಗಭೂಷಣ ಅಧ್ಯಕ್ಷರು ಪ್ರಾಥ-ಮಿಕ ಸಹಕಾರಿ ಸಂಘ ಮಸ್ಕಿ, ಮಲ್ಲಯ್ಯ ಮಸ್ಕಿ, ಬಸವರಾಜ ಕಡುಬೂರ, ಮಲ್ಲಪ್ಪ ಬಾರ್ಕೆರ, ಮಾನಯ್ಯ ಅಂಕಸದೊಡ್ಡಿ, ಗುಡುದಪ್ಪ ಕಡಬೂರು, ಅಯ್ಯಾಳಿ ಕ್ಯಾತ್ನಟ್ಟಿ, ದುರ್ಗೇಶ್ ಹೂವಿನಬಾವಿ, ಲಕ್ಷ್ಮಿಪತಿ ದೊಣ್ಣಮರಡಿ, ಮಲ್ಲಯ್ಯ ನೀಲಗಲ್, ಬಸವರಾಜ್ ಹಿಟ್ನಾಳ್, ದುರ್ಗಪ್ಪ ಬಸಾಪುರ್, ಗದ್ದಪ್ಪ ಸಂತೆಕಲ್ಲೂರ್, ಬಸವರಾಜ್ ಗೂಗ್ಗಿ ಹಾಗೂ ಇತರರು ಇದ್ದರು.

# ಶ್ರೀ ರಾಮಲಿಂಗ ಶ್ರೀ ಚೌಡೇಶ್ವರಿ ಅಮ್ಮನವರ ವೈಭವದ ಉಚ್ಛಾಯ ಮಹೋತ್ಸವ



❏ ನೈಜ್ಯ ದೆಸೆ ನ್ಯೂಸ್



**ಮಾನ್ವಿ: ಪಟ್ಟಣದ ಗ್ರಾಮ ದೇವತೆಯಾದ ಶ್ರೀ ರಾಮಲಿಂಗ ಶ್ರೀ ಚೌಡೇಶ್ವರಿ ದೇವಸ್ಥಾನದಲ್ಲಿ ಶ್ರೀ ರಾಮಲಿಂಗ ಶ್ರೀ ಚೌಡೇಶ್ವರಿ ಅಮ್ಮನವರ ಉಚ್ಛಾಯ ಮಹೋತ್ಸವ ಅಂಗವಾಗಿ ಭಾನುವಾರ ಶ್ರೀ ಚೌಡೇಶ್ವರಿ ಅಮ್ಮನವರಿಗೆ ಅಭಿಷೇಕ, ಮಹಾಮಂಗಳಾರತಿ, ವಿಶೇಷವಾಗಿ ಹೂವಿನ ಅಲಂಕಾರ ಮಾಡಲಾಯಿತು.**

ಸಂಜೆ ಸಾವಿರಾರು ಭಕ್ತರ ಸಮುಖದಲ್ಲಿ ಶ್ರೀ ರಾಮಲಿಂಗ ಶ್ರೀ ಚೌಡೇಶ್ವರಿ ಅಮ್ಮನವರ ಉತ್ಸವ ಮೂರ್ತಿಗಳನ್ನು ಪಲ್ಲಕ್ಕಿಯಲ್ಲಿಟ್ಟು ಮೆರವಣಿಗೆ ನಡೆಸಿ ನಂತರ ಉತ್ಸವ ಮೂರ್ತಿಗಳನ್ನು ಕಿರು ರಥ-ದಲ್ಲಿ ಕೂಡಿಸಿ ರಾಜಬೀದಿಗಳಲ್ಲಿ ಉಚ್ಛಾಯ ಮಹೋತ್ಸವ ವೈಭವದಿಂದ ನಡೆಸಲಾಯಿತು. ದೇವಸ್ಥಾನದ ಅನುವಂಶಿಕ ಧರ್ಮದರ್ಶಿ ಜಿ. ಶಿವಶಂಕರ ಸಾಹುಕಾರ ಮತ್ತು ಸಹೋದರರು ಹಾಗೂ ದೇವಾಂಗ ಸಮಾಜದವರು ಹಾಗೂ ಪಟ್ಟಣದ ಭಕ್ತರು ಶ್ರೀ ಚೌಡೇಶ್ವರಿ ಅಮ್ಮನವರಿಗೆ ಕಾಯಿ,ಹಣ್ಣು ಸಮರ್ಪಿಸಿ ಪೂಜೆ ಸಲ್ಲಿಸಿದರು ಮಾನ್ವಿ: ಪಟ್ಟಣದ ಗ್ರಾಮ ದೇವತೆಯಾದ ಶ್ರೀ ರಾಮಲಿಂಗ ಶ್ರೀ ಚೌಡೇಶ್ವರಿ ದೇವಸ್ಥಾನದಲ್ಲಿ ಶ್ರೀ ಚೌಡೇಶ್ವರಿ ಅಮ್ಮನವರಿಗೆ ವಿಶೇಷವಾಗಿ ಹೂವಿನ ಅಲಂಕಾರ ಮಾಡಲಾಯಿತು.

# ಕುವೆಂಪು ವಿಶ್ವಮಾನವ ಸಂದೇಶ ಅರಿಯೋಣ: ಗವಿಸಿದ್ದಪ್ಪ ಹೊಸಮನಿ

❏ ನೈಜ್ಯ ದೆಸೆ ನ್ಯೂಸ್





**ರಾಯಚೂರು: ಜನವರಿ 06 (ಕರ್ನಾಟಕ ವಾರ್ತೆ): ನಾವೆಲ್ಲರೂ ಒಂದೇ ಎಂದು ತಿಳಿಸುವ, ದೇಶ-ಕಾಲವನ್ನು ಮೀರಿದ ಕುವೆಂಪು ಅವರ ವಿಶ್ವಮಾನವ ಸಂದೇಶವನ್ನು ಪ್ರತಿಯೊಬ್ಬರು ಅರಿತು ನಡೆಯೋಣ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗವಿಸಿದ್ದಪ್ಪ ಹೊಸಮನಿ ಅವರು ಹೇಳಿದರು.**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜನವರಿ 6ರಂದು ನಡೆದ ವಿಶ್ವಮಾನವ ದಿನಾಚರಣೆಯನ್ನು ದೀಪ ಬೆಳಗಿಸಿ ಉದ್ಘಾಟಿಸಿ ಅವರು ಮಾತನಾಡಿದರು. ಗೌತಮ ಬುದ್ಧರ ಅಹಿಂಸಾ ತತ್ವ, ಬಸವಣ್ಣನವರ ಕಾಯಕದ ಮಹತ್ವ, ವಾಲ್ಮೀಕಿಯ ಮಾನವ ಕುಲ ತಾನೊಂದೇ ವಲಂ ಸಂದೇಶ, ಜೀವಕ್ಕೆ ಯಾವ ಕುಲ ಎನ್ನುವ ಕನಕದಾಸರ ನೀತಿ, ಸರ್ವ-ರಿಗೂ ಸಮಬಾಳು ಸರ್ವರಿಗೂ ಸಮಪಾಲು ತತ್ವ, ಸಮಾನತೆಯ ಕಲ್ಪನೆಯಡಿ ಸಂವಿಧಾನ ರಚಿಸಿದ ಡಾ.ಬಿ.ಆರ್.ಅಂಬೇಡ್ಕರ್ ಅವರಂತ ಅನೇಕ ಮಹನಿಯರ ಆಶಯ, ಸಂದೇಶ, ಮೌಲ್ಯಗಳನ್ನು ಕುವೆಂಪು ಅವರ ಬರೆಹದಲ್ಲಿ ಕಾಣಬಹುದಾಗಿದೆ. ಜೀವನ ಪ್ರೀತಿ ಹೊಂದು, ಸರ್ವರನ್ನೂ ಪ್ರೀತಿಸು ಎನ್ನುವ ಅನಿಕೇತನ ಸಂದೇಶದ ಕುವೆಂಪು ಅವರು ನೀಡಿದ ವಿಶ್ವಮಾನವ ಸಂದೇಶವು, ಸಂಕೀರ್ಣವಾಗುತ್ತಿರುವ ಇಂದಿನ ಸಮಾಜ-ಕ್ಕೆ ಔಷಧಿಯಂತಿದೆ ಎಂದು ಅವರು ತಿಳಿಸಿದರು.

ಹಿರಿಯ ಚಿಂತಕರು ಹಾಗೂ ಜಿಲ್ಲಾ ಗಮಕ ಪರಿಷತ್ತಿನ ಅಧ್ಯಕ್ಷರಾದ ವೆಂಕಟರಾವ್ ಕುಲಕರ್ಣಿ ಅವರು ವಿಶೇಷ ಉಪನ್ಯಾಸ ನೀಡಿ, ಕುವೆಂಪು ಅವರನ್ನು ನಾವು ಕವಿ ಎನ್ನುತ್ತೇವೆ. ಆದರೆ, ಅವರು ಕವಿಯಾಗಿರುವುದರ ಜೊತೆಗೆ ಅಸಾಧಾರಣ ಓದುಗರಾಗಿದ್ದರು. ಕುವೆಂಪು ಅವರು ಕನ್ನಡಕ್ಕಾಗಿಯೇ ತಮ್ಮ ಇಡೀ ಜೀವನವನ್ನು ಮುಡುಪಾಗಿಟ್ಟರು. ಸಾಹಿತ್ಯದ ಎಲ್ಲ ಪ್ರಕಾರದಲ್ಲೂ ಕೃಷಿ ಮಾಡಿದರು. ಆಡುಮುಟ್ಟದ ಸೊಪ್ಪಿಲ್ಲ ಕುವೆಂಪು ಅವರು ಓದದ ಗ್ರಂಥವಿಲ್ಲ ಎನ್ನುವಷ್ಟರ ಮಟ್ಟಿಗೆ ಅವರು ಅಧ್ಭುತ ಓದುಗರಾಗಿದ್ದರು. ಗ್ರಂಥಾಲಯಕ್ಕೆ ಬರುವ ಎಲ್ಲ ಹೊಸ ಹೊಸ ಪುಸ್ತಕಗಳನ್ನು ಆಯಾ ದಿನವೇ ಓದಿ ಮುಗಿಸುತ್ತಿದ್ದರು ಎಂದು ತಿಳಿಸಿದರು. ಹಿರಿಯ ಸಾಹಿತಿ ವೀರ ಹನುಮಾನ ಅವರು ಮಾತನಾಡಿ, 20ನೇ ಶತಮಾನವು ಕಂಡ ದೈತ್ಯ ಪ್ರತಿಭೆ ಕುವೆಂಪು ಆಗಿದ್ದಾರೆ.

ಪ್ರತಿಯೊಂದು ಭಾಷೆಗೂ ಭಾಷಾಂತರವಾಗುವ ಮಹತ್ವದ ಕೃತಿಗಳನ್ನು ಕುವೆಂಪು ಪ್ರಕಟಿಸಿದರು ಎಂದು ತಿಳಿಸಿದರು. ಸಮಾರಂಭದಲ್ಲಿ ಕನ್ನಡ ಪರ ಸಂಘಟನೆಯ ಸಿ.ಕೆ. ಜೈನ್, ಹಿರಿಯ ಚಿತ್ರ ಕಲಾವಿದರಾದ ಮ್ಯಾದರ್ ಹಾಗೂ ಇನ್ನೀತರರು ಉಪಸ್ಥಿತರಿದ್ದರು. ಕನ್ನಡ ಸಾಹಿತ್ಯ ಪರಿಷತ್ತಿನ ರಾವುತರಾವ್ ಬರೂರು ಸ್ವಾಗತಿಸಿದರು. ಹಿರಿಯ ಗಾಯಕಿ ಪ್ರತಿಭಾ ಗೋನಾಳ ನಾಡಿಗೀತೆ ಹೇಳಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸೇರಿದಂತೆ, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಮತ್ತು ಇನ್ನೀತರರು ಇದ್ದರು.

## ನೇಮಕಾತಿ ಪ್ರಕಟಣೆ

HAL ಇಂಡಿಯಾ ನೇಮಕಾತಿ 2026: 1 ವಿಸಿಟಿಂಗ್ ಕನ್ಸಲ್ಟೆಂಟ್ (ಮೂತ್ರಶಾಸ್ತ್ರ) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಜನವರಿ 2026 ರ HAL ಇಂಡಿಯಾ ಅಧಿಕೃತ ಅಧಿಸೂಚನೆಯ ಮೂಲಕ ವಿಸಿಟಿಂಗ್ ಕನ್ಸಲ್ಟೆಂಟ್ (ಮೂತ್ರಶಾಸ್ತ್ರ) ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರು – ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 17–ಜನವರಿ–2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: hal-india.co.in

## ಗ್ರಾಮ ಆರೋಗ್ಯ ನೈರ್ಮಲ್ಯ ಮತ್ತು ಪೌಷ್ಟಿಕ ಆಹಾರ ದಿನಾಚರಣೆ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜನವರಿ 06: ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಮತ್ತು ಮಹಿಳೆ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಿಂಧನೂರು ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ಸಮೀಪದ ತುರಕಟ್ಟಿ ಕ್ಯಾಂಪ್ ನಲ್ಲಿ ಇರುವ ಅಂಗನವಾಡಿ ಕೇಂದ್ರದಲ್ಲಿ ಗ್ರಾಮ ಆರೋಗ್ಯ ಮತ್ತು ಪೌಷ್ಟಿಕ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.**





ಕಾರ್ಯಕ್ರಮದ ಕುರಿತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಮಾತನಾಡಿ ಗರ್ಭಿಣಿಯರಲ್ಲಿ ಮತ್ತು ಮಕ್ಕಳಲ್ಲಿ ಕಂಡುಬರುವ ರಕ್ತಹೀನತೆಯನ್ನು ಮತ್ತು ಅಪೌಷ್ಟಿಕತೆ ತಡೆಗಟ್ಟುವ ನಿಟ್ಟಿನಲ್ಲಿ ಅಂಗನವಾಡಿ ಕೇಂದ್ರದಲ್ಲಿ ದೊರೆಯುವ ಪೌಷ್ಟಿಕ ಆಹಾರವನ್ನು ತಾಯಿಂದಿರು ಸೇವನೆ ಮಾಡಬೇಕು ಮತ್ತು ತಮ್ಮ ಮಕ್ಕಳ ಆರೋಗ್ಯದ ಬೆಳವಣಿಗೆಗೆ ತಪ್ಪದೇ ಪೌಷ್ಟಿಕ ಆಹಾರವನ್ನು ನೀಡಬೇಕು ಮಕ್ಕಳ ಬೆಳವಣಿಗೆ ಬಗ್ಗೆ ಮಕ್ಕಳ ಆರೈಕೆ ಮಾಡಬೇಕು ಎಂದರು.

ನಂತರ ಮಾತನಾಡಿದ ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳು ಲಿಂಗಮ್ಮ ಅವರು ಮಾತನಾಡಿ ಗರ್ಭಿಣಿ ಅವಧಿಯಲ್ಲಿ ರಕ್ತಹೀನತೆಯಿಂದ ಉಂಟಾಗದಂತೆ ಸಮಯಕ್ಕೆ ಸರಿಯಾಗಿ ಆರೋಗ್ಯ ತಪಾಸಣೆ ಪೌಷ್ಟಿಕ ಆಹಾರ ಬಹಳ ಮುಖ್ಯವಾಗಿದೆ ಹಾಗೂ ಮಕ್ಕಳ ಆರೋಗ್ಯಯುತ ಬೆಳವಣಿಗೆಗೆ ಬಾಲ್ಯವಸ್ಥೆಯಲ್ಲಿ ಬರಬಹುದಾದ ಕಾಯಿಲೆಗಳನ್ನು ತಡೆಗಟ್ಟಲು ಲಸಿಕೆಯನ್ನು ಪಡೆಯುವುದು ಕಡ್ಡಾಯ ಹಾಗೂ ಮಕ್ಕಳ ಉತ್ತಮ ಆರೋಗ್ಯಕರ ಬೆಳವಣಿಗೆಗೆ ಪೌಷ್ಟಿಕ ಆಹಾರ ಬಹಳಷ್ಟು ಮಹತ್ವ ವಹಿಸುವುದು ತಾಯಿಂದಿರು ಹಾಗೂ ತಮ್ಮ ಮಕ್ಕಳನ್ನು ಆರೈಕೆ ಮಾಡುವುದು ಬಹಳಷ್ಟು ಅಗತ್ಯವಿದೆ ಎಂದರು. ಈ ಸಂದರ್ಭದಲ್ಲಿ ಗ್ರಾಮದ ತಾಯಿಂದಿರು ಹಾಗೂ ಗರ್ಭಿಣಿಯರು ಅಂಗನವಾಡಿ ಕಾರ್ಯಕರ್ತರಾದ ರಾಜೇಶ್ವರಿ ಮತ್ತು ಆಶಾ ಕಾರ್ಯಕರ್ತೆ ಮಾಲಾಶ್ರೀ ಇನ್ನಿತರರು ಉಪಸ್ಥಿತರಿದ್ದರು.

## ಮುಂಬರುವ ಬೇಸಿಗೆ ನಿರ್ವಹಣೆಗೆ ಈಗಿನಿಂದಲೇ ಸಿದ್ಧತೆಯಾಗಲಿ: ಶಾಸಕರಾದ ಬಸನಗೌಡ ದದ್ದಲ್ ಸೂಚನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 06 (ಕರ್ನಾಟಕ ವಾರ್ತೆ): ಸಾಮಾನ್ಯವಾಗಿ ರಾಯಚೂರು ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನ ಹೆಚ್ಚಿರುವುದರಿಂದ ಮುಂಬರಲಿರುವ ಬೇಸಿಗೆಯ ಅವಧಿಯಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಪೂರೈಕೆ ಸೇರಿದಂತೆ ಎಲ್ಲಾ ಅಗತ್ಯ ಸೌಕರ್ಯಕ್ಕೆ ಈಗಿನಿಂದಲೇ ಕಾರ್ಯಯೋಜನೆ ರೂಪಿಸಬೇಕು ಎಂದು ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು, ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಎಲ್ಲ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮತ್ತು ಇನ್ನೀತರ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.**

ನಗರದ ತಾಲೂಕು ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜನವರಿ 6ರಂದು ನಡೆದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ ಶಾಸಕರು, ಬೇಸಿಗೆ ಅವಧಿಯ ಸಮರ್ಪಕ ನಿರ್ವಹಣೆಗೆ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಶಿಸ್ತುಬದ್ಧವಾಗಿ ಮೇಲ್ವಿಚಾರಣೆ ಮಾಡಬೇಕು ಎಂದು ಸೂಚನೆ ನೀಡಿದರು. ಜಲಧಾರೆ ಯೋಜನೆಯ ಪ್ರಗತಿಯ ಏನಾಗಿದೆ. ನದಿ ದಂಡೆಯ ಗ್ರಾಮಗಳಿಗೆ ಶುದ್ಧೀಕರಿಸಿದ ನೀರನ್ನು ಕೊಡುತ್ತಿದ್ದೀರಾ ಎಂದು ಶಾಸಕರು ಕೇಳಿದರು. ಜಲಧಾರೆ ಯೋಜನೆಯ ಕಾಮಗಾರಿಗಳ ಬಗ್ಗೆ ಪ್ರಗತಿ ಸಾಧಿಸಲು ಗುತ್ತಿಗೆದಾರರಿಗೆ ಸೂಚಿಸಲಾಗಿದೆ. ಅರಳಿಬೆಂಚಿ ಕಾಮಗಾರಿ ಬುನಾದಿ ಹಂತವನ್ನು ನಿರ್ಮಿಸಲಾಗಿದ್ದು ಎಸ್‌ಪಿಟಿ ಡಿಸೈನ್ ಮಾಡಲಾಗಿದೆ. ಗುಂಜಳ್ಳಿ ಗ್ರಾಮದ ಓಎಚ್‌ಟಿ ಟ್ಯಾಂಕ್ ದುರಸ್ಥಿಯಲ್ಲಿದ್ದು ನೆಲಸಮ ಮಾಡಲು ಮತ್ತು ಜಂಬಲದಿನ್ನಿ ಗ್ರಾಮದ ಓಎಚ್‌ಟಿ ಟ್ಯಾಂಕ್ ನಿರ್ಮಾಣಕ್ಕೆ ಬೇರೆ ಸ್ಥಳ ಗುರುತಿಸಲು ಗುತ್ತಿಗೆದಾರರಿಗೆ ತಿಳಿಸಲಾಗಿದೆ. ನದಿ ದಂಡೆಯ ಗ್ರಾಮಗಳಿಗೆ ಶುದ್ಧೀಕರಿಸಿ ನೀರು ಸರಬರಾಜು ಮಾಡಲಾಗಿದೆ ಎಂದು ಅಧಿಕಾರಿಗಳು ಪ್ರತಿಕ್ರಿಯಿಸಿದರು. ಅತ್ತೂರು ಕೆರೆ ಮತ್ತು ಕಲಮಲಾ ಕೆರೆಯ ಕಾರ್ಯಗಳ ಬಗ್ಗೆ ಶಾಸಕರು ಕೇಳಿದರು. ಅತ್ತೂರ ನದಿ ದಡದ ಕೆರೆಗೆ ನೀರು ತುಂಬಿಸಲು 24*7 ವಿದ್ಯುತ್ ಲೈನ್ ನೀಡಲು ಕಾಮಗಾರಿಗಳ ಅಂದಾಜು ಪತ್ರಿಕೆಗಳನ್ನು ಜೆಸ್ಕಾಂ ಇಲಾಖೆಯವರು ನೀಡಿದ್ದು ಕಾಮಗಾರಿ ಪೂರ್ಣಗೊಳಿಸಲಾಗುವುದು. ಕಲಮಲಾ ಕೆರೆಯ ವಿದ್ಯುತ್ ಕಾಮಗಾತಿಯು ಮುಕ್ತಾಯ ಹಂತದಲ್ಲಿದೆ ಎಂದು ಅಧಿಕಾರಿಗಳು ಸಭೆಗೆ ತಿಳಿಸಿದರು. ಕೃಷಿ ಇಲಾಖೆಯ ಚಟುವಟಿಕೆಗಳ ಬಗ್ಗೆ ಶಾಸಕರು ಕೇಳಿದರು. ಮುಂಗಾರು ಹಂಗಾಮಿನಲ್ಲಿ ಸೆಪ್ಟೆಂಬರ್ ಮಾಹೆಯಲ್ಲಿ ಸುರಿದ ಮಳೆಯಿಂದಾಗಿ ಬೆಳೆಹಾನಿಯಾಗಿದೆ. ಕಂದಾಯ ಮತ್ತು ಕೃಷಿ ಇಲಾಖೆಗಳಿಂದ ಜಂಟಿ ಸಮೀಕ್ಷೆ ಕೈಗೊಂಡಿದ್ದು ಬೆಳೆಹಾನಿ ವರದಿ ಸಲ್ಲಿಸಲಾಗಿದೆ. ರಾಯಚೂರು ಗ್ರಾಮೀಣ ಕ್ಷೇತ್ರದಲ್ಲಿ 10,672 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಗಳಿಗೆ ಹಾನಿಯಾಗಿದೆ. ನ್ಯಾನೋ ಯೂರಿಯಾ ಬಳಕೆ ಹಾಗೂ ಪ್ರಯೋಜನೆಗಳ ಬಗ್ಗೆ ತಾಲೂಕಿನ ಎಲ್ಲಾ ಹೋಬಳಿಗಳಲ್ಲಿ ತರಬೇತಿ ನಡೆಸಲಾಗಿದೆ ಎಂದು ಕೃಷಿ ಅಧಿಕಾರಿಗಳು ಸಭೆಗೆ ತಿಳಿಸಿದರು. ಗ್ರಾಮೀಣ ಪ್ರದೇಶದಲ್ಲಿ ಶೈಕ್ಷಣಿಕ ಸ್ಥಿತಿಗತಿಯ ಬಗ್ಗೆ ಶಾಸಕರು ಕೇಳಿದರು. ರಾಯಚೂರು ತಾಲೂಕಿನ ಗ್ರಾಮೀಣ ಭಾಗದ ಒಟ್ಟು 27 ಶಾಲೆಗಳಲ್ಲಿ ಎಲ್‌ಕೆಜಿ ಮತ್ತು ಯುಕೆಜಿ ತರಗತಿ ಆರಂಭಿಸಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಿಳಿಸಿದರು. ಗ್ರಾಮ ಮತ್ತು ಜನಸಂಖ್ಯೆಯನುಸಾರ ಅಗತ್ಯವಿರುವ ಕಡೆಗೆ ಕೆಪಿಎಸ್ ಶಾಲೆಗಳನ್ನು ಆರಂಭಿಸುವುದಕ್ಕೆ ಮಾರ್ಪಾಡು ಪ್ರಸ್ತಾವನೆ ಸಿದ್ಧಪಡಿಸಿ ಸಲ್ಲಿಸಲು ಶಾಸಕರು ಬಿಇಓ ಅವರಿಗೆ ಸೂಚನೆ ನೀಡಿದರು. ಸಿಂಗನೋಡಿ ಟ್ರಿ ಪಾರ್ಕ್ ಹಾಗೂ ಗಾಣದಾಳ ದೈವವನ ಕಾರ್ಯದ ಬಗ್ಗೆ ಶಾಸಕರು ಕೇಳಿದರು. ಯರಗೇರಾ ಟ್ರಿ ಪಾರ್ಕ ರೂ. 93.1055 ಮಂಜೂರಾಗಿರುತ್ತದೆ. ಸಿಂಗನೋಡಿ ಟ್ರಿ ಪಾರ್ಕ, ಗಾಣದಾಳ ದೈವಿವನಕ್ಕೆ ಡಿಪಿಆರ್ ಮಾಡಿ ಕಳುಹಿಸಿದ್ದು ಈ ಡಿಪಿಆರ್‌ಗೆಳಿಗೆ ಅನುಮೋದನೆ ಸಿಕ್ಕಿದೆ. ಪ್ರಸ್ತುತ ವರ್ಷ ಸಿಂಗನೋಡಿ ಟ್ರಿ ಪಾರ್ಕಗೆ 50 ಲಕ್ಷ ರೂ. ಹಾಗೂ ಪಂಚಮುಖಿ ಗಾಣದಾಳ ದೈವಿವನಕ್ಕೆ 19 ಲಕ್ಷ ರೂ ಅನುದಾನ ಮಂಜೂರಾತಿಗೆ ಆದೇಶವಾಗಿದೆ ಎಂದು ವಲಯ ಅರಣ್ಯಾಧಿಕಾರಿಗಳು ಪ್ರತಿಕ್ರಿಯಿಸಿದರು. ಸಭೆಯಲ್ಲಿ ಸಹಾಯಕ ಆಯುಕ್ತರಾದ ಡಾ.ಸಂಗಣ್ಣ, ತಹಸೀಲ್ದಾರ ಸುರೇಶ ವರ್ಮಾ, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಪವಾರ, ರಾಯಚೂರು ಒಕ್ಕುಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಂಘದ ಅಧ್ಯಕ್ಷರಾದ ಜಯವಂತರಾವ್ ಪತಂಗೆ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕಾಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ ಸೇರಿದಂತೆ ನಾಮನಿರ್ದೇಶಿತ ಸದಸ್ಯರು ಹಾಗೂ ತಾಲೂಕುಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

## ಮಾನ್ವಿಯಲ್ಲಿ ಶ್ರೀ ಚೌಡೇಶ್ವರಿ ಅಮ್ಮನವರ ಮಹಾರಥೋತ್ಸವ: ಭಕ್ತಿ–ಸಾಗರದಲ್ಲಿ ತೇಲಿದ ತೇರು

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಆರಾಧ್ಯ ದೈವ, ಗ್ರಾಮದೇವತೆ ಶ್ರೀ ರಾಮಲಿಂಗ ಚೌಡೇಶ್ವರಿ ದೇವಸ್ಥಾನದಲ್ಲಿ ಶ್ರೀ ಚೌಡೇಶ್ವರಿ ಅಮ್ಮನವರ ಮಹಾರಥೋತ್ಸವವು ಸೋಮವಾರ ಸಂಜೆ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ವಿಜೃಂಭಣೆಯಿಂದ ಜರುಗಿತು.**



ರಥೋತ್ಸವಕ್ಕೂ ಮುನ್ನ ದೇವಸ್ಥಾನದಲ್ಲಿ ಬೆಳಿಗ್ಗೆಯಿಂದಲೇ ದೇವಿಗೆ ವಿಶೇಷ ಪೂಜೆ, ಪಂಚಾಮೃತಾಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಕೈಂಕರ್ಯಗಳನ್ನು ಭಕ್ತಿಪೂರ್ವಕವಾಗಿ ನೆರವೇರಿಸಲಾಯಿತು. ನಂತರ ಹೂವುಗಳಿಂದ ಮನೋಹರವಾಗಿ ಅಲಂಕೃತಗೊಂಡ ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಮೆರವಣಿಗೆಯ ಮೂಲಕ ತರಳಿ, ರಥದಲ್ಲಿ ಪ್ರತಿಷ್ಠಾಪಿಸಲಾಯಿತು. ಸಂಜೆಯ ಹೊತ್ತಿಗೆ ಮಂಗಳವಾದ್ಯಗಳ ಘೋಷದ ನಡುವೆ ಸಾವಿರಾರು ಭಕ್ತರು "ಚೌಡಮ್ಮ ತಾಯಿಗೆ ಜೈ" ಎಂದು ಜಯಘೋಷ ಮೊಳಗಿಸುತ್ತಾ ಭಕ್ತಿ–ಭಾವದಿಂದ ತೇರನ್ನು ಎಳೆದರು.

ಭಕ್ತರ ಅಪಾರ ಜಯಕಾರದ ಮಧ್ಯೆ ರಥವು ನಿಗದಿತ ಮಾರ್ಗದಲ್ಲಿ ಸಂಚರಿಸಿ ಸ್ವಸ್ಥಾನ ಸೇರಿದಾಗ ನೆರೆದಿದ್ದ ಜನಸ್ತೋಮ ಹರ್ಷೋದ್ಗಾರ ವ್ಯಕ್ತಪಡಿಸಿತು. ಈ ಸಂದರ್ಭದಲ್ಲಿ ಭಕ್ತರು ರಥಕ್ಕೆ ಬಾಳೆಹಣ್ಣು ಹಾಗೂ ಉತ್ತುತ್ತಿ ಎಸೆದು ತಮ್ಮ ಹರಕೆಗಳನ್ನು ತೀರಿಸಿದರು. ರಥೋತ್ಸವದ ಅಂಗವಾಗಿ ದೇವಸ್ಥಾನದ ಆವರಣ ಹಾಗೂ ಸುತ್ತಮುತ್ತಲ ಪ್ರದೇಶವನ್ನು ವಿದ್ಯುತ್ ದೀಪಾಲಂಕಾರದಿಂದ ಅಲಂಕರಿಸಲಾಗಿದ್ದು, ಸಂಪೂರ್ಣ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸ್ ಇಲಾಖೆ ಬಿಗಿ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಿತ್ತು.

## ಸಾಮಾಜಿಕ ಜಾಲತಾಣದಿಂದ ದೂರವಿರಿ: ಸಂತೋಷ ಲಾಡ್

ನೈಜ್ಯ ದೆಸೆ ನ್ಯೂಸ್

**ಲಿಂಗಸೂಗೂರು: 'ಧರ್ಮ, ಜಾತಿ ಹೆಸರಿನಲ್ಲಿ ಸುಳ್ಳು ಮಾಹಿತಿಗಳನ್ನು ಉದ್ದೇಶಪೂರ್ವಕವಾಗಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡಲಾಗುತ್ತಿದೆ. ಈಗಾಗಿ ವಿದ್ಯಾರ್ಥಿ ಸಮುದಾಯ ಸಾಮಾಜಿಕ ಜಾಲತಾಣಗಳಿಂದ ದೂರ ಇರಬೇಕು' ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಹೇಳಿದರು.**




ಪಟ್ಟಣದಲ್ಲಿ ಭಾನುವಾರ ಬಸವೇಶ್ವರ ಪದವಿ ಪೂರ್ವ ಕಾಲೇಜಿನ ಬೆಳ್ಳಿ ಸಂಭ್ರಮದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು. 'ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುತ್ತಿರುವುದೆಲ್ಲಾ ಸತ್ಯವೆಂದು ಯುವ ಸಮುದಾಯ ದಾರಿ ತಪ್ಪುತ್ತಿದೆ. ಯುವಕರು ಜಾಗೃತರಾಗಬೇಕು, ಸದೃಢ ದೇಶ ಹಾಗೂ ಸಮಾಜ ಕಟ್ಟುವ ಮಹತ್ವದ ಜವಾಬ್ದಾರಿ ಯುವ ಸಮುದಾಯದ ಮೇಲಿದೆ' ಎಂದರು. 'ದೇಶದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆ ಕುಸಿದಿದೆ. ವಿಶ್ವ ವಿದ್ಯಾಲಯಗಳ 100 ರ‍್ಯಾಂಕಿಂಗ್‌ನಲ್ಲಿ ದೇಶದ ಯಾವುದೇ ವಿವಿ ಇಲ್ಲ' ಎಂದರು.

ಕಾನೂನು ವಿವಿ ನಿವೃತ್ತ ಉಪಕುಲಪತಿ ಡಾ.ಜೆ.ಎಸ್.ಪಾಟೀಲ, ಕೇಂದ್ರದ ಮಾಜಿ ಸಚಿವ ಬಸವರಾಜ ಪಾಟೀಲ ಅನ್ವರಿ, ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಅಮರೇಗೌಡ ಪಾಟೀಲ ಬಯ್ಯಾಪುರ, ಆಡಳಿತಾಧಿಕಾರಿ ಬಸವಂತರಾಯ ಕುರಿ, ಪ್ರಾಚಾರ್ಯ ಬಸವಂತರಾಯ ಕುರಿ, ಕಣ್ಮೇಶ ಚಿತ್ತಾಪುರ, ಸೂಗುರೆಡ್ಡಿ ಮೇಟಿ, ಬಸವರಾಜ ಪಾಟೀಲ ಹಾಗೂ ಇನ್ನಿತರರಿದ್ದರು.

## ವಾತ್ಸಲ್ಯ ಯೋಜನೆಯಡಿ ಮನೆ ನಿರ್ಮಾಣಕ್ಕೆ ಭೂಮಿ ಪೂಜೆ



ನೈಜ್ಯ ದೆಸೆ ನ್ಯೂಸ್

**ಸಿರವಾರ: ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಾತ್ಸಲ್ಯ ಯೋಜನೆಯಡಿ ನಿರ್ಗತಿಕರಿಗೆ ಒದಗಿಸುವ ಉಚಿತ ಮನೆ ನಿರ್ಮಾಣಕ್ಕೆ ಜಿಲ್ಲಾ ಯೋಜನಾ ನಿರ್ದೇಶಕ ರಾಘವೇಂದ್ರ ಸೋಮವಾರ ಭೂಮಿ ಪೂಜೆ ನೆರವೇರಿಸಿದರು.**

ಪಟ್ಟಣದ ವಿಜಯನಗರ ಕಾಲೊನಿಯ ಬಸಮ್ಮ ಅವರಿಗೆ ಮಂಜೂರಾದ ವಾತ್ಸಲ್ಯ ಯೋಜನೆಯ ಮನೆ ನಿರ್ಮಾಣಕ್ಕೆ ಭೂಮಿಪೂಜೆ ಸಲ್ಲಿಸಿ ಮಾತನಾಡಿದ ಅವರು, 'ವಾತ್ಸಲ್ಯ' ಯೋಜನೆ ಹೇಮಾವತಿ ಅಮ್ಮನವರ ಕನಸಿನ ಕೂಸು ನಿರ್ಗತಿಕರಿಗೆ ಸೂರು ಕಲ್ಪಿಸುವ ಮಹತ್ವದ ಯೋಜನೆ ಇದಾಗಿದೆ' ಎಂದರು. ಜಿಲ್ಲಾ ಜನ ಜಾಗೃತಿ ಸಮಿತಿ ಕೋಶಾಧಿಕಾರಿ ಅಯ್ಯನಗೌಡ ಏರಡ್ಡಿ ಮಾತನಾಡಿ, 'ನಮ್ಮಲ್ಲಿರುವ ನಿರ್ಗತಿಕರನ್ನು ಸ್ಥಳೀಯರಾದ ನಾವು ಗುರುತಿಸಲು ಸಾಧ್ಯವಾಗದಿದ್ದರೂ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಗುರುತಿಸುತ್ತಿರುವುದು ನಮ್ಮ ಭಾಗ್ಯ' ಎಂದರು.

ತಾಲ್ಲೂಕು ಯೋಜನಾಧಿಕಾರಿ ಬಿ.ಚಂದ್ರಹಾಸ, ಜಿಲ್ಲಾ ಜನಜಾಗೃತಿ ಸಮಿತಿ ಸದಸ್ಯ ಜ್ಞಾನಮಿತ್ರ, ಜ್ಞಾನ ವಿಕಾಸದ ಸಮನ್ವಯಾಧಿಕಾರಿ ಯಶೋಧಾ, ವಲಯ ಮೇಲ್ವಿಚಾರಕಿ ವನೀತಾ ಹಾಗು ಒಕ್ಕೂಟದ ಅಧ್ಯಕ್ಷೆ ಲಕ್ಷ್ಮಿ, ಅಂಬಿಕಾ, ಗೀತಾ ಮತ್ತು ಪದಾಧಿಕಾರಿಗಳು,ಸೇವಾ ಪ್ರತಿನಿಧಿಗಳಾದ ಶಾಂತಾ,ಸೌಮ್ಯ, ಕಲ್ಪನಾ, ಪರ್ವೀನ್, ದುರ್ಗಮ್ಮ ಹಾಗು ಸಿಬ್ಬಂದಿ ಅಕ್ಬರ್ ಹಾಜರಿದ್ದರು.

## ದಾಖಲೆ ಬರೆದ ಸಿಎಂ ಸಿದ್ದರಾಮಯ್ಯ ಅಭಿಮಾನಿಗಳಿಂದ ಬಾಡೂಟ

ನೈಜ್ಯ ದೆಸೆ ನ್ಯೂಸ್

**ಕೊಪ್ಪಳ: ರಾಜ್ಯದಲ್ಲಿ ಸುದೀರ್ಘ ಅವಧಿಯ ಮುಖ್ಯಮಂತ್ರಿ ಎಂಬ ಐತಿಹಾಸಿಕ ದಾಖಲೆಯನ್ನು ಸರಿಗಟ್ಟಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಭಿಮಾನಿಗಳು ತಾಲ್ಲೂಕಿನ ಹಾಲವರ್ತಿ ಗ್ರಾಮದಲ್ಲಿ ಮಂಗಳವಾರ ಸಂಭ್ರಮಾಚರಣೆ ನಡೆಸಿದರು. ಈ ಸಂಭ್ರಮದ ಭಾಗವಾಗಿ ಜವಾರಿ ಕೋಳಿ ಬಾಡೂಟ ಆಯೋಜಿಸಿ, ಗ್ರಾಮಸ್ಥರೊಂದಿಗೆ ಸಂತೋಷ ಹಂಚಿಕೊಂಡರು.**



ಹಾಲವರ್ತಿ ಗ್ರಾಮ ಪಂಚಾಯಿತಿ ಸದಸ್ಯ ಆನಂದ ಕಿನ್ನಾಳ ಮಾತನಾಡಿ, "ಸಿದ್ದರಾಮಯ್ಯ ಅವರು ಈ ದಾಖಲೆಯನ್ನು ಸಾಧಿಸಿರುವುದು ನಮ್ಮೆಲ್ಲರಿಗೂ ಅಪಾರ ಸಂತಸ ತಂದಿದೆ. ಅವರು ರಾಜ್ಯ ಕಂಡ ಧೀಮಂತ ಮತ್ತು ಜನಪರ ನಾಯಕರು. ಬಡವರು, ರೈತರು, ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಸದಾ ಶ್ರಮಿಸಿದ ನಾಯಕ ಸಿದ್ದರಾಮಯ್ಯ. ಉಳಿದ ಅವಧಿಗೂ ಅವರೇ ಮುಖ್ಯಮಂತ್ರಿ ಆಗಿ ಮುಂದುವರಿಯಲಿ ಎಂಬುದು ನಮ್ಮ ಆಶಯ" ಎಂದು ಹೇಳಿದರು.

ಗ್ರಾಮದ ವಿವಿಧ ಭಾಗಗಳಿಂದ ಆಗಮಿಸಿದ ಅಭಿಮಾನಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರ ಘೋಷಣೆಗಳನ್ನು ಕೂಗಿದರು. ಪರಸ್ಪರ ಸಿಹಿ ಹಂಚಿಕೊಂಡು, ಬಾಡೂಟದ ಮೂಲಕ ಸಂಭ್ರಮಾಚರಣೆ ನಡೆಸಿದ್ದು ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಈ ಕಾರ್ಯಕ್ರಮದಲ್ಲಿ ಗ್ರಾಮ ಮುಖಂಡರಾದ ಭರಮಪ್ಪ ಗೊರವರ, ಮುದಿಯಪ್ಪ ಆದೋನಿ, ಬಾಳಪ್ಪ ಕುರಗಡ್ಡಿ, ಸಿಂದೊಗೆಪ್ಪ ಹೊಸಳ್ಳಿ, ಮುತ್ತು ಹಾಲವರ್ತಿ,

ಕೇಮಪ್ಪ ಇಟಗಿ, ಕುಷ್ಟಗಿ ಹನಮಂತ, ಶೇಖರಪ್ಪ ನಾಯಕ್, ಗಿಡ್ಡಪ್ಪ ಸಿರಗೇರಿ, ದೇವಪ್ಪ ಗೋರ್, ಹಾಲಪ್ಪ ಮಲ್ಲಕ್ಕಿ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಅಭಿಮಾನಿಗಳು ಮಾತನಾಡಿ, "ಸಿದ್ದರಾಮಯ್ಯ ಅವರ ಆಡಳಿತ ಶೈಲಿ ಹಾಗೂ ಸಾಮಾಜಿಕ ನ್ಯಾಯಕ್ಕೆ ನೀಡಿರುವ ಒತ್ತು ರಾಜ್ಯದ ಇತಿಹಾಸದಲ್ಲಿ ಮಾದರಿಯಾಗಿದೆ. ಇಂತಹ ನಾಯಕನ ಸಾಧನೆ ನಮಗೆ ಹೆಮ್ಮೆ ತಂದಿದೆ" ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

## ಜ.10 ರಂದು ನೇತಾಜಿ ವಿಜ್ಞಾನ ಕಾಲೇಜು ಉದ್ಘಾಟನೆ ಮತ್ತು ವಿಜ್ಞಾನ ವಸ್ತು ಪ್ರದರ್ಶನ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಜ.10 ರಂದು ಶನಿವಾರ ಪಟ್ಟಣದ ನೇತಾಜಿ ಶಿಕ್ಷಣ ಸಂಸ್ಥೆಯ ಅಧೀನದಲ್ಲಿರುವ ನೇತಾಜಿ ಪಿ.ಯು. ಕಾಲೇಜಿನಲ್ಲಿ ವಿಜ್ಞಾನ ವಿಭಾಗವನ್ನು ಅಧಿಕೃತವಾಗಿ ಉದ್ಘಾಟಿಸಲಾಗುತ್ತಿದ್ದು, ಇದರ ಅಂಗವಾಗಿ "ನೇತಾಜಿ ವಿಜ್ಞಾನ ವೈಭವ" ಶೀರ್ಷಿಕೆಯಡಿ ಮೂರು ದಿನಗಳ ವಿಜ್ಞಾನ ವಸ್ತು ಪ್ರದರ್ಶನ ಹಮ್ಮಿಕೊಳ್ಳಲಾಗಿದೆ ಎಂದು ನೇತಾಜಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೆ. ವಿಜಯಲಕ್ಷ್ಮಿ ತಿಳಿಸಿದ್ದಾರೆ.**

ಈವರೆಗೆ ನೇತಾಜಿ ಪಿ.ಯು. ಕಾಲೇಜಿನಲ್ಲಿ ಕಲಾ ಹಾಗೂ ವಾಣಿಜ್ಯ ವಿಭಾಗಗಳು ಮಾತ್ರ ಕಾರ್ಯನಿರ್ವಹಿಸುತ್ತಿದ್ದು, ಈ ಶೈಕ್ಷಣಿಕ ವರ್ಷದಿಂದ ವಿಜ್ಞಾನ ವಿಭಾಗಕ್ಕೆ ಇಲಾಖೆಯ ಅನುಮತಿ ಲಭಿಸಿದೆ. ಇದು ಸಂಸ್ಥೆಯ ಶೈಕ್ಷಣಿಕ ಬೆಳವಣಿಗೆಯಲ್ಲಿ ಮತ್ತೊಂದು ಮಹತ್ವದ ಮೈಲಿಗಲ್ಲಾಗಿದ್ದು, ವಿಜ್ಞಾನ ವಿಭಾಗದ ಉದ್ಘಾಟನೆಯೊಂದಿಗೆ ವಿಜ್ಞಾನ ವಸ್ತು ಪ್ರದರ್ಶನವನ್ನೂ ಏರ್ಪಡಿಸಲಾಗಿದೆ ಎಂದು ಅವರು ವಿವರಿಸಿದರು.




ವಸ್ತು ಪ್ರದರ್ಶನದಲ್ಲಿ ವಿಜ್ಞಾನ, ಇತಿಹಾಸ, ಗಣಿತ, ವಾಣಿಜ್ಯ, ಕಲೆ, ಕೃಷಿ, ಸಾಹಿತ್ಯ, ಸಂಸ್ಕೃತಿ, ಭಾಷೆ, ಖಗೋಳಶಾಸ್ತ್ರ, ಭೂಮಿ ಸಂರಕ್ಷಣೆ, ಆಯುರ್ವೇದ, ಅಬ್ಯಾಕಸ್ ಸೇರಿದಂತೆ ವಿವಿಧ ವಿಷಯಗಳಿಗೆ ಸಂಬಂಧಿಸಿದ ವರ್ಕಿಂಗ್ ಮಾದರಿಗಳು, ಸ್ಥಿರ ಮಾದರಿಗಳು, ಪ್ರಯೋಗಗಳು, ಪುಷ್ಪ ಪ್ರದರ್ಶನ, ಸೌರ ವ್ಯವಸ್ಥೆ ಮುಂತಾದವು ಸೇರಿ ಒಟ್ಟು 270ಕ್ಕೂ ಹೆಚ್ಚು ಪ್ರದರ್ಶನಗಳು ಇರಲಿವೆ. ಈ ವಿಜ್ಞಾನ ವೈಭವವು ಶಿಕ್ಷಣ, ಕಲೆ, ಸಾಹಿತ್ಯ, ವಿಜ್ಞಾನ ಹಾಗೂ ಸಂಸ್ಕೃತಿಯ ಸಂಗಮವಾಗಲಿದೆ ಎಂದು ವಿಜಯಲಕ್ಷ್ಮಿ ತಿಳಿಸಿದರು.

ಉದ್ಘಾಟನೆ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ವಿಜ್ಞಾನ, ತಂತ್ರಜ್ಞಾನ ಮತ್ತು ಸಣ್ಣ ನೀರಾವರಿ ಸಚಿವರಾದ ಎನ್.ಎಸ್. ಭೋಸರಾಜು, ಶಾಸಕ ಜಿ. ಹಂಪಯ್ಯ ನಾಯಕ, ಪ್ರಥಮ ದರ್ಜೆ ಗುತ್ತೇದಾರ ಎಂ. ಈರಣ್ಣ, ನ.ಯೋ.ಪ್ರಾ. ಅಧ್ಯಕ್ಷ ಅಬ್ದುಲ್ ಗಫೂರಸಾಬ್, ಪಿ.ಯು. ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸೋಮಶೇಖರ್ ಹೊಕ್ರಾಣಿ, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್ ದೊಡ್ಡನಿ, ಪಕ್ಷಿಪ್ರೇಮಿ ಸಲ್ಲಾವುದ್ದೀನ್, ಖಾ.ಶಿ.ಸಂ. ಒಕ್ಕೂಟದ ಅಧ್ಯಕ್ಷ ರಾಜಾ ಸುಭಾಶ್ಚಂದ್ರ ನಾಯಕ, ಕಾಲೇಜು ಒಕ್ಕೂಟದ ಅಧ್ಯಕ್ಷ ತಿಪ್ಪಣ್ಣ ಬಾಗಲವಾಡ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಬಿ.ಕೆ. ಅಮರೇಶಪ್ಪ, ಟಿ.ಎ.ಪಿ.ಸಿ.ಎಂ.ಎಸ್. ಅಧ್ಯಕ್ಷ ತಿಮ್ಮಾರೆಡ್ಡಿ ಭೋಗಾವತಿ, ನೇಕಾರ ಸಮುದಾಯಗಳ ಒಕ್ಕೂಟದ ಅಧ್ಯಕ್ಷ ಜಿ. ನಾಗರಾಜ್, ಪುರಸಭೆಯ ಮಾಜಿ ಸದಸ್ಯ ರೌಡೂರು ಸ್ವಾಮಿ, ಹಾಲಿ ಸದಸ್ಯ ಶರಣಪ್ಪ ಮೇಧಾ,

ನೌಕರರ ಸಂಘದ ಅಧ್ಯಕ್ಷ ಸುರೇಶ್ ಕುರ್ಡಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಸಂಗಮೇಶ ಮುಧೋಳ, ಪ್ರೌಢ ಶಾಲಾ ಶಿಕ್ಷಕರ ಸಂಘದ ಎಂ. ಅಶೋಕ ಕುಮಾರ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ. ಕಾರ್ಯಕ್ರಮವು ಶನಿವಾರ ಮಧ್ಯಾಹ್ನ 1 ಗಂಟೆಗೆ ಆರಂಭಗೊಳ್ಳಲಿದ್ದು, ಅಂದು ಸಂಜೆ 4.30 ಗಂಟೆಯವರೆಗೆ ನಡೆಯಲಿದೆ. ಜೊತೆಗೆ ದಿನಾಂಕ 12 ರ ಸೋಮವಾರ ಹಾಗೂ 13 ರ ಮಂಗಳವಾರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 4.30 ಗಂಟೆಯವರೆಗೆ ವಿದ್ಯಾರ್ಥಿಗಳು, ಪಾಲಕರು ಹಾಗೂ ಸಾರ್ವಜನಿಕರಿಗೆ ವಸ್ತು ಪ್ರದರ್ಶನ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಕಾರ್ಯದರ್ಶಿ ಕೆ. ವಿಜಯಲಕ್ಷ್ಮಿ ತಿಳಿಸಿದ್ದಾರೆ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### M pharma pharmacognosy

M.Pharm in Pharmacognosy ಕಾರ್ಯಕ್ರಮವು ನೈಸರ್ಗಿಕ ಔಷಧಗಳು ಮತ್ತು ಅವುಗಳ ವಿವಿಧ ಭೌತಿಕ, ರಾಸಾಯನಿಕ, ಸೂಕ್ಷ್ಮದರ್ಶಕ ಮತ್ತು ಜೈವಿಕ ಗುಣಲಕ್ಷಣಗಳ ಅಧ್ಯಯನದ ಮೇಲೆ ಕೇಂದ್ರೀಕರಿಸುತ್ತದೆ. ಇದು ನೈಸರ್ಗಿಕ ಮೂಲಗಳಿಂದ ಹೊಸ ಔಷಧಗಳ ಹುಡುಕಾಟವನ್ನೂ ಒಳಗೊಂಡಿರುತ್ತದೆ. ಈ ಕಾರ್ಯಕ್ರಮವು ವೈದ್ಯಕೀಯ ಉದ್ದೇಶಗಳಿಗಾಗಿ ನೈಸರ್ಗಿಕ ಮೂಲಗಳಿಂದ ಸಂಯುಕ್ತಗಳನ್ನು ಹೊರತೆಗೆಯುವುದು ಮತ್ತು ಪ್ರತ್ಯೇಕಿಸುವಲ್ಲಿ ವಿದ್ಯಾರ್ಥಿಗಳಿಗೆ ತರಬೇತಿ ನೀಡುತ್ತದೆ ಮತ್ತು ಔಷಧೀಯ, ಗಿಡಮೂಲಿಕೆ/ಆಯುರ್ವೇದ, ಪೌಷ್ಟಿಕ ಔಷಧ ಮತ್ತು ಕಾಸ್ಮೆಸ್ಯುಟಿಕಲ್ ಉದ್ಯಮಗಳಲ್ಲಿನ ವೃತ್ತಿಜೀವನಕ್ಕೆ ಅವರನ್ನು ಸಿದ್ಧಪಡಿಸುತ್ತದೆ. ಗಿಡಮೂಲಿಕೆ ಔಷಧಿಗಳ ಪ್ರಮಾಣೀಕರಣ ಮತ್ತು ವಿಶ್ಲೇಷಣೆಗೆ ಹೆಚ್ಚಿದ ಬೇಡಿಕೆಯು ತರಬೇತಿ ಪಡೆದ ಔಷಧ ವಿಜ್ಞಾನ ವೃತ್ತಿಪರರ ಅಗತ್ಯವನ್ನು ಸೃಷ್ಟಿಸಿದೆ ಮತ್ತು ಈ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಪ್ರಕೃತಿಯಲ್ಲಿ ಕಂಡುಬರುವ ರಾಸಾಯನಿಕ ಪದಾರ್ಥಗಳನ್ನು ಸಂಶೋಧಿಸಲು ಮತ್ತು ರೋಗ ಚಿಕಿತ್ಸೆಗೆ ಅವುಗಳ ಸಾಮರ್ಥ್ಯವನ್ನು ಮೌಲ್ಯಮಾಪನ ಮಾಡಲು ಅವಕಾಶವನ್ನು ಒದಗಿಸುತ್ತದೆ. ಅವಧಿ: 2 ವರ್ಷಗಳು (4 ಸೆಮಿಸ್ಟರ್‌ಗಳು). ಕೇಂದ್ರಿತ ವಿಷಯಗಳು: ನೈಸರ್ಗಿಕ ಉತ್ಪನ್ನಗಳು, ಔಷಧೀಯ ಸಸ್ಯಗಳ ಕೃಷಿ, ಗಿಡಮೂಲಿಕೆ ಔಷಧಿಗಳ ಗುಣಮಟ್ಟ ನಿಯಂತ್ರಣ, ಫೈಟೋಕೆಮಿಸ್ಟ್ರಿ (Phytochemistry), ಟಾಕ್ಸಿಕಾಲಜಿ (Toxicity), ಮತ್ತು ಬಯೋಟೆಕ್ನಾಲಜಿ (Biotechnology). ಉದ್ದೇಶ: ನೈಸರ್ಗಿಕ ಮೂಲಗಳಿಂದ ಹೊಸ ಔಷಧಗಳನ್ನು ಹುಡುಕಲು ಮತ್ತು ಅಭಿವೃದ್ಧಿಪಡಿಸಲು ವಿದ್ಯಾರ್ಥಿಗಳಿಗೆ ತರಬೇತಿ ನೀಡುವುದು. ಅರ್ಹತೆ ಮತ್ತು ಪ್ರವೇಶ: ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ B. Pharm ಪದವಿ. ಸಾಮಾನ್ಯವಾಗಿ ಕನಿಷ್ಠ 50–60% ಅಂಕಗಳು. GPAT (Graduate Pharmacy Aptitude Test) ಸ್ಕೋರ್. ಅರ್ಜಿ ಸಲ್ಲಿಸಿ, ಪ್ರವೇಶ ಪರೀಕ್ಷೆ, ಸಂದರ್ಶನ ಅಥವಾ ಕೌನ್ಸೆಲಿಂಗ್ ಮೂಲಕ ಆಯ್ಕೆ. ಉದ್ಯೋಗಾವಕಾಶಗಳು: ರಿಸರ್ಚ್ ಅಸೋಸಿಯೇಟ್, ಕ್ವಾಲಿಟಿ ಕಂಟ್ರೋಲ್ ಎಕ್ಸಿಕ್ಯೂಟಿವ್, ಪ್ರೊಡಕ್ಷನ್ ಎಕ್ಸಿಕ್ಯೂಟಿವ್, ಡ್ರಗ್ ಇನ್ಸ್ಪೆಕ್ಟರ್. ಔಷಧೀಯ, ಗಿಡಮೂಲಿಕೆ, ನ್ಯೂಟ್ರಾಸ್ಯುಟಿಕಲ್ ಮತ್ತು ಕಾಸ್ಮೆಸ್ಯುಟಿಕಲ್ ಉದ್ಯಮಗಳಲ್ಲಿ ಕೆಲಸ. ಆಸ್ಪತ್ರೆಗಳು, ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳಲ್ಲಿ ಉದ್ಯೋಗ. ಸಂಕ್ಷಿಪ್ತವಾಗಿ ಹೇಳಬೇಕೆಂದರೆ, M. Pharm in Pharmacognosy ಎನ್ನುವುದು ನೈಸರ್ಗಿಕ ಔಷಧಗಳ ಅಧ್ಯಯನ ಮತ್ತು ಸಂಶೋಧನೆಯಲ್ಲಿ ಆಸಕ್ತಿ ಇರುವವರಿಗೆ ಸೂಕ್ತವಾದ ಕೋರ್ಸ್ ಆಗಿದೆ, ಇದು ಉದ್ಯಮ ಮತ್ತು ಸಂಶೋಧನೆಯಲ್ಲಿ ಉತ್ತಮ ಅವಕಾಶಗಳನ್ನು ಒದಗಿಸುತ್ತದೆ.

# ಗವಿಮಠ ಮಾನವೀಯತೆಯ ಪಾಠಶಾಲೆ

ನೈಜ್ಯ ದೆಸೆ ನ್ಯೂಸ್

**ಕೊಪ್ಪಳ: 'ಅನ್ನ, ಅಕ್ಷರ ದಾಸೋಹಕ್ಕೆ ಮಾತ್ರ ಸೀಮಿತವಾಗದೆ ಈ ಭಾಗದ ಜಲ, ನೆಲ, ಪ್ರಾಕೃತಿಕ ರಕ್ಷಣೆಗೆ ಗವಿಸಿದ್ದೇಶ್ವರ ಮಠವು ನಿರಂತರವಾಗಿ ಶ್ರಮಿಸುತ್ತಿದೆ. ಗವಿಮಠ ಈ ಭಾಗದ ಜನರ ಭರವಸೆ, ನಂಬಿಕೆ ಪ್ರತೀಕವಾಗಿದೆ. ಕೇವಲ ಧಾರ್ಮಿಕ ಸಂಸ್ಥೆಯಾಗದೆ ಮೌಲ್ಯಗಳ ದೀಪಸ್ತಂಭ, ಕರುಣೆಯ ಆಶ್ರಯ ತಾಣ, ಮಾನವೀಯತೆ ಪಾಠ ಶಾಲೆಯಾಗಿ ಕೆಲಸ ಮಾಡುತ್ತಿದೆ' ಎಂದು ಮೇಘಾಲಯದ ರಾಜ್ಯಪಾಲರಾದ ಸಿ.ಎಚ್.ವಿಜಯಶಂಕರ್ ಬಣ್ಣಿಸಿದರು.**

ಜಾತ್ರೆಯ ಅಂಗವಾಗಿ ಕೈಲಾಸ ಮಂಟಪದಲ್ಲಿ ಸೋಮವಾರ ನಡೆದ ಧಾರ್ಮಿಕ ಗೋಷ್ಠಿಯಲ್ಲಿ ಮಾತನಾಡಿದ ಅವರು 'ಅಕ್ಷರ ದಾಸೋಹ, ಜ್ಞಾನ ದಾಸೋಹ, ಅನ್ನ ದಾಸೋಹ ಮನುಕುಲವನ್ನು




ಸನ್ಮಾರ್ಗಕ್ಕೆ ಕರೆದುಕೊಂಡು ಹೋಗುತ್ತದೆ. ಸ್ವಾಮೀಜಿ ಸಾಧನೆ ಅವಲೋಕಿಸಿದರೆ ಅವರಲ್ಲಿ ಅಪಾರ ಮಹಿಮೆ ಕಾಣುತ್ತೇವೆ. ಗವಿಸಿದ್ದೇಶ್ವರ ಸ್ವಾಮೀಜಿ ಸಮಾಜಮುಖಿ ಕಾರ್ಯಕ್ಕೆ ಉದಾಹರಣೆಯಾಗಿದ್ದಾರೆ. ಬದುಕುವ ಸಂದೇಶವನ್ನು ಮನುಕುಲಕ್ಕೆ ತಿಳಿಸುತ್ತಿದ್ದಾರೆ. ಮನುಕುಲ ಬೆಳಗುತ್ತಿರುವ ಕರ್ಮಯೋಗಿಯಾಗಿದ್ದಾರೆ' ಎಂದರು.

ಪರಿಸರದ ಉಳಿವಿಗಾಗಿ ಕೆಲಸ ಮಾಡುತ್ತಿರುವ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ರಾಜಸ್ಥಾನದ ಶ್ಯಾಮಸುಂದರ್ ಪಾಲಿವಾಲ್ ಮಾತನಾಡಿ 'ಜಾತ್ರೆಯಲ್ಲಿ ಪಾಲ್ಗೊಂಡಿದ್ದು ನನ್ನ ಸೌಭಾಗ್ಯವಾಗಿದೆ. ಪರಿಸರದ ಮೂಲಕ ಉತ್ತಮ ವಾತಾವರಣ ನಿರ್ಮಾಣ ಮಾಡುವುದು ಆದ್ಯತೆಯಾಗಬೇಕು. ಗ್ರಾಮದಲ್ಲಿ ಉತ್ತಮ ಪರಿಸರ ನಿರ್ಮಾಣ ಮಾಡಿದರೆ ನೆಲ, ಜಲ ರಕ್ಷಿಸಬಹುದು. ಜನ್ಮದಿನದಂದು ಗಿಡ ನೆಡುವ ಮೂಲದ ಮಾದರಿಯಾಗಬೇಕು. ಪಂಚಾಯಿತಿಗಳ ಹಣದಿಂದ ವಿಭಿನ್ನ ಯೋಜನೆಗಳನ್ನು ರೂಪಿಸಿ ಅಭಿವೃದ್ಧಿ ಮಾಡಬೇಕು' ಎಂದು ಹೇಳಿದರು.

ಹುಬ್ಬಳ್ಳಿಯ ಮೂರುಸಾವಿರ ಮಹಾಸಂಸ್ಥಾನ ಮಠದ ಗುರುಸಿದ್ಧ ರಾಜಯೋಗೀಂದ್ರ ಸ್ವಾಮೀಜಿ, ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ನಿರಂಜನಾನಂದಪುರಿ ಸ್ವಾಮೀಜಿ, ಕಾಖಂಡಕಿ ಗುರುದೇವಾಶ್ರಮದ ಯೋಗೀಶ್ವರ ಸ್ವಾಮೀಜಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು. ಶಿವಮೊಗ್ಗದ ಹಿಂದೂಸ್ತಾನಿ ಗಾಯಕ ವಿದ್ವಾನ್ ನೌಶಾದ್, ನಿಶಾದ್ ಹರ್ಲಾಪುರ್ ಅವರಿಂದ ಸ್ವರಸಂಧ್ಯಾ ಜಗಲ್‌ಬಂದಿ ಮತ್ತು ಗಂಗಾವತಿಯ ನರಸಿಂಹ ಜೋಶಿ ಇವರಿಂದ ಹಾಸ್ಯ ಕಾರ್ಯಕ್ರಮ ಜರುಗಿತು.

# ಬಳಗಾನೂರು ಪಟ್ಟಣ ಪಂಚಾಯಿತಿಗೆ ಲೋಕಾಯುಕ್ತ ದಾಳಿ: ದಾಖಲೆಗಳ ಪರಿಶೀಲನೆ.



ನೈಜ್ಯ ದೆಸೆ ನ್ಯೂಸ್

**ಬಳಗಾನೂರು: ಜ,6:–ಪಟ್ಟಣ ಪಂಚಾಯಿತಿ ಮತ್ತು ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಮೇಲೆ ಲೋಕಾಯುಕ್ತ ಪೊಲೀಸರು ಇತ್ತೀಚೆಗೆ ದಾಳಿ ನಡೆಸಿ, ಪ್ರಮುಖ ದಾಖಲೆಗಳನ್ನು ಪರಿಶೀಲನೆಗೆ ಒಳಪಡಿಸಿದ್ದಾರೆ.**

ನೇತೃತ್ವ: ಲೋಕಾಯುಕ್ತ ಪೊಲೀಸ್ ಉಪನಿರೀಕ್ಷಕರಾದ ಕರುಣೇಶ್ ಗೌಡ ಮತ್ತು ಶ್ರೀಕಾಂತ ಅವರ ನೇತೃತ್ವದ ತಂಡ ಈ ಕಾರ್ಯಾಚರಣೆ ನಡೆಸಿದೆ. ಕಾರಣ: ಕೆಲವು ತಿಂಗಳುಗಳ ಹಿಂದೆ ಉಪಲೋಕಾಯುಕ್ತ ವೀರಪ್ಪ ಅವರು ರಾಯಚೂರಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ, ಸಾರ್ವಜನಿಕರಿಂದ ಸಾಲು ಸಾಲು ದೂರುಗಳು ಸಲ್ಲಿಕೆಯಾಗಿದ್ದವು. ಉದ್ದೇಶ: ಸಾರ್ವಜನಿಕರು ನೀಡಿದ ದೂರುಗಳ ಆಧಾರದ ಮೇಲೆ ವಸ್ತುಸ್ಥಿತಿಯನ್ನು ಅಧ್ಯಯನ ಮಾಡುವುದು ಮತ್ತು ಕರ್ತವ್ಯ ಲೋಪ ಎಸಗಿದ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವುದು ಈ ದಾಳಿಯ ಮುಖ್ಯ ಉದ್ದೇಶವಾಗಿದೆ. ಪಟ್ಟಣ ಪಂಚಾಯಿತಿ ಹಾಗೂ ಆರೋಗ್ಯ ಕೇಂದ್ರದಲ್ಲಿನ ವ್ಯವಸ್ಥೆ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿರುವ ತಂಡವು, ಮುಂದಿನ ಕ್ರಮಕ್ಕಾಗಿ ವರದಿಯನ್ನು ಸಿದ್ಧಪಡಿಸುತ್ತಿದೆ ಎನ್ನಲಾಗಿದೆ.

# ವಾಯುಭಾರ ಕುಸಿತ: ಕರಾವಳಿ, ಮಲೆನಾಡಿನ ಕೆಲವೆಡೆ ಮಳೆ ಸಾಧ್ಯತೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಹಿಂದೂ ಮಹಾ ಸಾಗರದ ಶ್ರೀಲಂಕಾ ಬಳಿ ವಾಯುಭಾರ ಕುಸಿತ ಉಂಟಾಗಿದ್ದು, ಜ.8ರಿಂದ ಕರಾವಳಿ, ಮಲೆನಾಡು ಹಾಗೂ ದಕ್ಷಿಣ ಒಳನಾಡಿನ ಕೆಲವೆಡೆ ಮಾತ್ರ ಮಳೆಯಾಗುವ ಮುನ್ಸೂಚನೆಗಳಿವೆ. ವಾಯುಭಾರ ಕುಸಿತದ ಪರಿಣಾಮದಿಂದ ರಾಜ್ಯದ ದಕ್ಷಿಣ ಒಳನಾಡು ಹಾಗೂ ಕರಾವಳಿ ಭಾಗದಲ್ಲಿ ಭಾಗಶಃ ಮೋಡ ಕವಿದ ವಾತಾವರಣ ಕಂಡು ಬರಲಿದೆ. ಜೊತೆಗೆ ಶೀತ ಗಾಳಿಯೂ ಆಗಾಗ್ಗೆ ಬೀಸಲಿದೆ. ಇದರಿಂದ ಬೆಳಗಿನ ಜಾವ ತೀವ್ರ ಚಳಿ ಕಂಡು ಬರಲಿದೆ. ಬಹಳಷ್ಟು ಕಡೆಗಳಲ್ಲಿ ಮಂಜು ಕವಿದ ವಾತಾವರಣವಿರಲಿದೆ.**



ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ ಇನ್ನೊಂದು ವಾರ ರಾಜ್ಯದಲ್ಲಿ ಒಣಹವೆ ಮುಂದುವರೆಯಲಿದೆ. ಆದರೆ, ಉತ್ತರ ಒಳನಾಡು ಹಾಗೂ ಮಧ್ಯ ಕರ್ನಾಟಕ ಭಾಗದಲ್ಲಿ ಕನಿಷ್ಠ ಉಷ್ಣಾಂಶವು ವಾಡಿಕೆಗಿಂತ ಕಡಿಮೆಯಾಗಲಿದ್ದು, ಚಳಿಯ ಪ್ರಮಾಣ ಹೆಚ್ಚಾಗಲಿದೆ. ಕರಾವಳಿ, ಮಲೆನಾಡು ಹಾಗೂ ದಕ್ಷಿಣ ಒಳನಾಡಿನಲ್ಲಿ ಕನಿಷ್ಠ ತಾಪಮಾನ ವಾಡಿಕೆ ಪ್ರಮಾಣದಲ್ಲಿರುವ ಮುನ್ಸೂಚನೆಗಳು ಕಂಡುಬರುತ್ತಿವೆ.ಕಳೆದ ನಾಲ್ಕೈದು ದಿನಗಳಿಂದ ಮತ್ತೆ ತಂಪಾದ ಗಾಳಿ ಬೀಸುತ್ತಿದ್ದು, ಚಳಿಯ ತೀವ್ರತೆಯೂ ಹೆಚ್ಚಾಗಿದೆ. ಹಗಲು ವೇಳೆ ಬಿಸಿಲು ಕಂಡು ಬಂದರೂ ಶೀತಗಾಳಿಯಿಂದ ಚಳಿಯ ಅನುಭವಾಗುತ್ತಿದೆ. ಸಂಜೆ, ರಾತ್ರಿ ಹಾಗೂ ಮುಂಜಾನೆ ಚಳಿ ಹೆಚ್ಚಾಗಿರುತ್ತದೆ. ವಾಯುಭಾರ ಕುಸಿತದ ನೇರ ಪರಿಣಾಮ ರಾಜ್ಯದ ಮೇಲಾಗುವುದಿಲ್ಲ. ಹೀಗಾಗಿ ಭಾರಿ ಮಳೆಯ ಮುನ್ಸೂಚನೆಗಳಿಲ್ಲ. ಪರೋಕ್ಷ ಪರಿಣಾಮದಿಂದ ಜ.8ರಿಂದ ಮೂರ್ನಾಲ್ಕು ದಿನಗಳ ಕಾಲ ಭಾಗಶಃ ಮೋಡ ಕವಿದ ವಾತಾವರಣ ಹಾಗೂ ಶೀತ ಗಾಳಿ ಕಂಡು ಬರಲಿದೆ. ಕೆಲವೆಡೆ ಮಾತ್ರ ಅಲ್ಲಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಗಳಿವೆ.

# ತಾಯಿ ಮಗುವಿನ ಸುರಕ್ಷತೆಗಾಗಿ ಸರಕಾರಿ ಆಸ್ಪತ್ರೆಗಳಲ್ಲಿ ಹೆರಿಗೆಗಾಗಿ ಇರುವ ಗುಣಮಟ್ಟದ ಸೌಲಭ್ಯಗಳ ಮಾಹಿತಿಯನ್ನು ಪಾಲಕರಿಗೆ ನಿರಂತರವಾಗಿ ನೀಡಿ:ಡಾ ಸುರೇಂದ್ರ ಬಾಬು

ನೈಜ್ಯ ದೆಸೆ ನ್ಯೂಸ್

**ಹೆರಿಗೆ ಎಂಬುದು ಪ್ರತಿ ಗರ್ಬಿಣಿ ಮಹಿಳೆಯ ಜೀವನದಲ್ಲಿ ಒಂದು ಪುನರ್ಜನ್ಮವಿದ್ದಂತೆ, ಪ್ರಸ್ತುತ ಜಿಲ್ಲೆಯ ಸರಕಾರಿ ಆಸ್ಪತ್ರೆಗಳಲ್ಲಿ ಹೆರಿಗೆಗಾಗಿ ಇರುವ ಸುಸಜ್ಜಿತ ಹೆರಿಗೆ ಕೊಠಡಿ, ಬಿಸಿನೀರು ಸೌಲಭ್ಯ, ನುರಿತ ತಜ್ಞ ವೈದ್ಯರು, ಹಾಗೂ ಸಿಬ್ಬಂದಿಯವರ ಸೇವೆ ಹಾಗೂ ಹೆರಿಗೆ ನಂತರ ಮಕ್ಕಳನ್ನು ಬೆಚ್ಚಗಿಡಲು ಬೆಬಿ ವಾರ್ಮರ್ ವ್ಯವಸ್ಥೆಯನ್ನು ಕರ್ನಾಟಕ ಸರಕಾರವು ಎಲ್ಲ ಅರೋಗ್ಯ ಕೇಂದ್ರಗಳಲ್ಲಿ ಕಲ್ಪಿಸಿದ್ದು ಸಾರ್ವಜನಿಕರು ಖಾಸಗಿ ಆಸ್ಪತ್ರೆಗಳಿಗೆ ತೆರಳದೆ ಹತ್ತಿರದ ಸರಕಾರಿ ಆಸ್ಪತ್ರೆಗಳಲ್ಲಿ ಹೆರಿಗೆ ಮಾಡಿಸಲು ತಪಾಸಣೆಯ ಸಂದರ್ಭದಲ್ಲಿ ಗರ್ಭಿಣಿಯೊಂದಿಗೆ ಆಗಮಿಸುವ ಪಾಲಕರಿಗೆ ನಿರಂತರ ಮಾಹಿತಿಯನ್ನು ನೀಡಿ ಎಂದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರ ಬಾಬು ಅರಕೆರಾ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯರು ಹಾಗೂ ಸಿಬ್ಬಂದಿಯರಿಗೆ ತಿಳಿಸಿದರು.**



ಅರಕೇರಾ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸ್ಥಳೀಯ ಆಡಳಿತದ ಅಧಿಕಾರಿಗಳೊಂದಿಗೆ ಬೇಟಿ ನೀಡಿದ ಸಂದರ್ಭದಲ್ಲಿ ಆಸ್ಪತ್ರೆಗೆ ಆಗಮಿಸಿದ ಸಾರ್ವಜನಿಕರೊಂದಿಗೆ ಮಾತನಾಡಿ ತದನಂತರ ವೈದ್ಯರು ಹಾಗೂ ಸಿಬ್ಬಂದಿಯರೊಂದಿಗೆ ಮಾತನಾಡುತ್ತಾ, ಒಂದು ಜೀವಕ್ಕೆ ಜನ್ಮ ನೀಡುವ ತಾಯ್ತನದ ಅತ್ಯಂತ ಮಹತ್ವದ ಘಟ್ಟವಾದ ಹೆರಿಗೆಯು ಸುರಕ್ಷಿತವಾಗಿರಲು ಸಹಕಾರಿಯಾಗಲು ಅರಕೇರಾ ಸೇರಿದಂತೆ ಜಿಲ್ಲೆಯ ಎಲ್ಲ ಅರೋಗ್ಯ ಕೇಂದ್ರಗಳಲ್ಲಿ ರಕ್ತ ಪರೀಕ್ಷೆ, ರಕ್ತದೊತ್ತಡ, ಹೆಚ್‌ಐವಿ, ಸಕ್ಕರೆ ಕಾಯಿಲೆ, ಮುಂತಾದವುಗಳ ಪರೀಕ್ಷೆಗೆ ವ್ಯವಸ್ಥೆ ಮಾಡಲಾಗಿದೆ.

ಅಲ್ಲದೆ ಹೆರಿಗೆ ಸಂಧರ್ಭದಲ್ಲಿ ಉಂಟಾಗುವ ಅಪಾಯಕಾರಿ ಸನ್ನಿವೇಶಗಳನ್ನು ನಿವಾರಿಸಲು ವೈದ್ಯರ ಸಲಹೆ ಮೇರೆಗೆ ಗರ್ಭಿಣಿಯರ ಪರೀಕ್ಷೆ ಮಾಡಿಸುವ ಮೂಲಕ ಅಪಾಯಕಾರಿ ಚಿನ್ಹೆಗಳನ್ನು ಗುರ್ತಿಸಿ ಅಗತ್ಯ ಚಿಕಿತ್ಸೆ ಪಡೆಯುವಂತೆ ಒಂದು ವೇಳೆ ಹೆಚ್ಚಿನ ಚಿಕಿತ್ಸೆಯ ಅವಶ್ಯಕತೆಯಿದ್ದಲ್ಲಿ ದೇವದುರ್ಗ ಅಥವಾ ರಾಯಚೂರುನ ರಿಮ್ಸ್ ಆಸ್ಪತ್ರೆ, ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ತಜ್ಞವೈದ್ಯರ ಸಮನ್ವಯದೊಂದಿಗೆ ಹೆರಿಗೆ ಮಾಡಿಸಲು ತಕ್ಷಣ ಕಳುಹಿಸಿ ಕೊಡಲು ಅಂಬ್ಯುಲೆನ್ಸ್ ಮೂಲಕ ಕಳುಹಿಸಿ ಕೊಡುವ ವ್ಯವಸ್ಥೆಯನ್ನು ಸಾರ್ವಜನಿಕರು ಸದುಪಯೋಗ ಪಡೆದು ಕೊಂಡು ಹಣ ಹಾಗೂ ಸಮಯದ ಉಳಿತಾಯ ಮಾಡಿಕೊಳ್ಳಲು ಜನತೆಗೆ ತಿಳಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ ಗಣೇಶ್ ಕೆ, ಪಿಡ್ಲ್ಯುಡಿ ಕಾರ್ಯಪಾಲಕ ಅಭಿಯಂತರರು, ಆಡಳಿತ ವೈದ್ಯಾಧಿಕಾರಿ ಡಾ ಶಂಶುದ್ದೀನ್, ಕಂದಾಯ ನಿರೀಕ್ಷಕರಾದ ರವಿ, ಡಾ ಬಸರಾಜ್, ಗ್ರಾಮ ಆಡಳಿತಾಧಿಕಾರಿ ಬಸವರಾಜ, ಎಫ್‌ಡಿಎ ಅಣಜಪ್ಪ, ಚಿರಂಜೀವಿ ಆಪ್ತಸಮಾಲೋಚಕ, ಆರೋಗ್ಯ ಮಿತ್ರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಉದ್ಯೋಗ ಖಾತ್ರಿ ಯೋಜನೆ ಸದುಪಯೋಗ ಮಾಡಿಕೊಳ್ಳಿ: ಕಸನಕ್ಕಿ



ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಬಡವರ ಬಾಳಿಗೆ ಬೆಳಕಾಗಿರುವ, ದುಡಿಯುವ ಕೈಗಳಿಗೆ ಕೆಲಸದೊಂದಿಗೆ ಸಮಾನ ಕೂಲಿಯನ್ನು ಒದಗಿಸುವ ಉದ್ಯೋಗ ಖಾತರಿ ಯೋಜನೆಯ ಲಾಭವನ್ನು ಎಲ್ಲರೂ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಾಲೂಕ ಪಂಚಾಯಿತಿಯ ಮನರೇಗಾ ಸಹಾಯಕ ನಿರ್ದೇಶಕ ಪಿ.ಎಸ್.ಕಸನಕ್ಕಿ ಹೇಳಿದರು.**

ತಾಲೂಕಿನ ಮೂಕಿಹಾಳ ಗ್ರಾಮ ಪಂಚಾಯತಿಯ ಸಭಾ ಭವನದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ರೋಜಗಾರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಪಂಚಾಯತ್ ರಾಜ್ ವ್ಯವಸ್ಥೆಯನ್ನು ಬಲಪಡಿಸುವುದು ಗ್ರಾಮೀಣ ಪ್ರದೇಶದಲ್ಲಿ ವಾಸವಿರುವ ಅರ್ಹ ಪ್ರತಿ ಕುಟುಂಬವು ಉದ್ಯೋಗ ಚೀಟಿ ಹೊಂದುವ ಹಕ್ಕು ಹೊಂದಿರುತ್ತಾರೆ. ಉದ್ಯೋಗ ಚೀಟಿಯಲ್ಲಿ ಹೆಸರಿರುವ ಕುಟುಂಬದ ಎಲ್ಲಾ ವಯಸ್ಕರು, ಅಕುಶಲ ದೈಹಿಕ ಕೆಲಸಕ್ಕಾಗಿ ಅರ್ಜಿ ಸಲ್ಲಿಸಲು ಹಕ್ಕುಳ್ಳವರಾಗಿರುತ್ತಾರೆ. ಒಂದು ಆರ್ಥಿಕ ವರ್ಷದಲ್ಲಿ ಒಂದು ಕುಟುಂಬ 100 ಮಾನವ ದಿನಗಳ ಕೆಲಸಕ್ಕಾಗಿ ಅರ್ಜಿ ಸಲ್ಲಿಸಬಹುದು. ಮಹಿಳೆಯರಿಗೆ ಮತ್ತು ಪುರುಷರಿಗೆ ಸಮಾನ ಕೂಲಿ. ಕೆಲಸಕ್ಕೆ ಬೇಡಿಕೆ ಸಲ್ಲಿಸಿದ ಹದಿನೈದು ದಿನದೊಳಗೆ ಕೆಲಸ ನೀಡಲಾಗುವುದು ಎಂದು ತಿಳಿದರು.

ನಂತರ ಕೂಲಿಕಾರರಿಂದ ಕೆಲಸದ ಬೇಡಿಕೆಯ ಅರ್ಜಿಯನ್ನು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಶ್ರೀದೇವಿ ಗೂಂಡಾಪೂರ ರವರಿಗೆ ಸಲ್ಲಿಸದರು. ಹೊಸ ಉದ್ಯೋಗ ಚೀಟಿಗಳನ್ನು ವಿತರಿಸಲಾಯಿತು. ಈ ಸಂದರ್ಬದಲ್ಲಿ ನರೇಗಾ ತಾಂತ್ರೀಕ ಸಂಯೋಜಕ ಮಹಾಂತೇಶ ಕಿಲಾರಟ್ಟಿ, ಐಇಸಿ ಸಂಯೋಜಕ ಮಲಕಪ್ಪ, ಗ್ರಾ.ಪಂ ಸಿಬ್ಬಂದಿಗಳು, ಬಿಎಫ್ ಟಿ ಲಕ್ಕಪ್ಪ, ಜೆಕೆ-ಎಮ್ ಮಹಾದೇವಿ, ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರುಗಳು, ಗ್ರಾಮಸ್ಥರು ಇದ್ದರು.

# ಮನರೇಗಾ ಕಾಯ್ದೆ ಹಕ್ಕು ತೆಗೆದು ಹಾಕಿದ್ದು ಸರಿಯಲ್ಲ ಹಿಂಪಡೆಯಲು ಕೃಷಿ ಕಾರ್ಮಿಕರ ಸಂಘ ಒತ್ತಾಯ

ನೈಜ್ಯ ದೆಸೆ ನ್ಯೂಸ್

**2004–5 ರಲ್ಲಿ ಎಡ ಪಕ್ಷಗಳ ಬೆಂಬಲದ ಮೇಲೆ ಆದಾರವಾಗಿದ್ದ ಮನಮೋಹನಸಿಂಗ್ ಸರ್ಕಾರ ಉದ್ಯೋಗ ಖಾತ್ರಿ ಕಾಯ್ದೆಯನ್ನು ಜಾರಿಗೊಳಿಸಿತ್ತು. ಈ ಕಾಯ್ದೆಯು ಗ್ರಾಮೀಣರ ಕೃಷಿ ಕಾರ್ಮಿಕರಿಗೆ ದೊಡ್ಡ ವರದಾನವಾಗಿತ್ತು. ಇದನ್ನು ಬಿಜೆಪಿ ನೇತೃತ್ವದ ಸರ್ಕಾರ ಬದಲಿಸುತ್ತಿರುವುದನ್ನು ಖಂಡಿಸಿ, ಜ.6 ಮಂಗಳವಾರ ಕರ್ನಾಟಕ ಕೃಷಿ ಮತ್ತು ಗ್ರಾಮೀಣ ಕಾರ್ಮಿಕರ ಸಂಘದಿಂದ ಸಾಲಗುಂದಾ, ಧಡೇಸೂಗೂರು, ಹಾಗೂ ವಿರುಪಾಪುರ ಗ್ರಾಮ ಪಂಚಾಯತಿಗಳ ಪಿಡಿಓ ಅವರ ಮೂಲಕ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.**

ಎಡ ಪಕ್ಷಗಳ ಒತ್ತಡದ ಹಿನ್ನಲೆಯಲ್ಲಿ ಮೂಡಿಬಂದ ಮನರೇಗಾವನ್ನು ಆಗಿನ ಕಾಂಗ್ರೆಸ್ ಸರ್ಕಾರ ಜಾರಿ ಮಾಡಿ, ಗ್ರಾಮೀಣ ಕಾರ್ಮಿಕರಿಗೆ ಉದ್ಯೋಗದ ಖಾತ್ರಿ ನೀಡಿತ್ತು. ಉದ್ಯೋಗ ಮನರೇಗಾದಲ್ಲಿ ಹಕ್ಕಾಗಿತ್ತು. ಕೆಲಸ ಕೇಳಿದ ಮೇಲೆ ಕೆಲಸ ಒದಗಿಸಬೇಕು ಇಲ್ಲದಿದ್ದಲ್ಲಿ ನಿರುದ್ಯೋಗ ಭತ್ಯೆಯನ್ನಾದರೂ ನೀಡಬೇಕು ಎಂದು ಕಾನೂನಿನಲ್ಲಿತ್ತು. ಈ ಮೂಲಭೂತ ಹಕ್ಕನ್ನೆ ಈಗಿನ ಜಿರಾಮಜಿ ಕಾಯ್ದೆ ಕಿತ್ತು ಹಾಕಿದೆ. ಹಣ ಇರುವವರೆಗೆ ಮಾತ್ರ ಕೆಲಸ ಎಂದಿದೆ. ಮತ್ತು ವಿಕೇಂದ್ರಿಕರಣದ ಮೂಲತತ್ವ ಗ್ರಾ.ಪಂಚಾಯತಿಗಳಿಗೆ ಮನರೇಗಾದಲ್ಲಿ ತೀರ್ಮಾನ ತೆಗೆದುಕೊಳ್ಳುವುದನ್ನು ಹೊಸ ಕಾಯ್ದೆಯನ್ನು ಬದಲಾಯಿಸಿ, ಗುತ್ತಿಗೆದಾರರಿಗೆ ನೀಡುವ ಯೋಜನೆ ರೂಪಿಸಿದೆ.



ಮೊದಲಿನ ಕೇಂದ್ರ ಸರ್ಕಾರದ ನೀಡುತ್ತಿದ್ದ ಅನುದಾನ ಬದಲಾಯಿಸಿ, ಈಗ ಶೇ.60 ರಷ್ಟು ಕೇಂದ್ರ ಸರ್ಕಾರ ಶೇ.40 ರಷ್ಟು ರಾಜ್ಯ ಸರ್ಕಾರ ಎಂದು ಬದಲಿಸಿದ್ದು, ಇದರಿಂದಾಗಿ ರಾಜ್ಯ ಸರ್ಕಾರಗಳ ಮೇಲೆ ಬಹುದೊಡ್ಡ ಆರ್ಥಿಕ ಹೊರೆ ಹೆಚ್ಚಾಗಲಿದೆ. ಹೊಸ ಕಾಯ್ದೆಯನ್ನು ರದ್ದು ಪಡಿಸಿ, ಹಿಂದಿನ ಮನರೇಗಾವನ್ನು ಜಾರಿಗೊಳಿಸಿ ಅದರಲ್ಲಿರುವ ನ್ಯೂನತೆಗಳನ್ನು ಬದಲಾಯಿಸಿ, ನಗರ ಪ್ರದೇಶಕ್ಕೆ ವಿಸ್ತರಿಸುವುದು. 200 ದಿನಗಳಿಗೆ ಮಾನವ ದಿನಗಳನ್ನು ಹೆಚ್ಚಿಸುವುದು, 600 ಕೂಲಿ ಹೆಚ್ಚಿಸುವ ಮಾರ್ಪಾಡು ಮಾಡಲು ಕರ್ನಾಟಕ ಕೃಷಿ ಮತ್ತು ಗ್ರಾಮೀಣ ಕಾರ್ಮಿಕರ ಸಂಘ ಒತ್ತಾಯಿಸಿ, ಜ.6ರ ಮಂಗಳವಾರದಂದು ಸಾಲಗುಂದಾ, ಧಡೇಸೂಗೂರು, ಹಾಗೂ ವಿರುಪಾಪುರ ಗ್ರಾಮ ಪಂಚಾಯತಿ ಮೂಲಕ ಪ್ರಧಾನಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ: ಮುಖಂಡರಾದ ಅಪ್ಪಣ್ಣ ಕಾಂಬ್ಳೆ, ಶಂಕ್ರಪ್ಪ ಕೆಂಗಲ್, ಹುಸೇನಪ್ಪ ಧಡೇಸೂಗೂರು, ಯಲ್ಲಪ್ಪ, ಮಲ್ಲಮ್ಮ, ಮೌನಮ್ಮ, ಖಾಜಾಬಿ, ಜೈನಾಬಿ, ಶಾದಿ ಅಲಿ, ಪಾರ್ವತಮ್ಮ, ಮದರಬಿ, ಈಬಳೇಸ್, ರಾಜಾಸಾಬ್, ಮೇಗಳಮನಿ ಯಲ್ಲಪ್ಪ, ರಾಜಪ್ಪ, ವೀರೇಶ, ಸತ್ಯಪ್ಪ, ಹನುಮೇಶ, ಚಿದಾನಂದಪ್ಪ, ಕರಿಯಮ್ಮ, ಹನುಮಂತ, ಗಂಗಮ್ಮ, ದುರುಗಮ, ಸೇರಿದಂತೆ ಅನೇಕ ಮನರೇಗಾ ಕಾರ್ಮಿಕರು ಇದ್ದರು.